ವಿಜಯಪುರ | ಸಂಪುಟ 02 | ಸಂಚಿಕೆ 53 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಮಂಗಳವಾರ, ಏಪ್ರಿಲ್ 16, 2024



"ನಾನು ಗ್ಯಾರಂಟಿ ಕೊಟ್ಟು ಮಹಿಳೆಯರಿಗೆ ಅನ್ಯಾಯ ಮಾಡಿದ್ದಾರೆ ಅನ್ನೋದನ್ನ ಹೇಳಿದ್ದೇನೆ. ಆದ್ರೆ ಕಾಂಗ್ರೆಸ್ ನಾಯಕರು ಅವರಿಗೆ ಬೇಕಾದಂತೆ ನನ್ನ ಹೇಳಿಕೆಯನ್ನ ಬಳಸಿಕೊಂಡಿದ್ದಾರೆ. ನನ್ನ ಹೇಳಿಕೆ ದುಃಖಕ್ಕೆ ಒಳಗಾಗುವ ಹಾಗೆ ಮಾಡಿದ್ದರೆ ವಿಷಾದ ವ್ಯಕ್ತಪಡಿಸುತ್ತೇನೆ."

– ಎಚ್.ಡಿ.ಕುಮಾರಸ್ವಾಮಿ
ಮಾಜಿ ಮುಖ್ಯಮಂತ್ರಿಗಳು

ಉದಯರಶ್ಮಿ ದಿನಪತ್ರಿಕೆ

**ನಾಮಪತ್ರ ವಾಪಸ್ ಪಡೆಯದಿದ್ರೆ ಉಚ್ಚಾಟನೆ? । ಏ.22 ಡೆಡ್ ಲೈನ್ । ಮನವೊಲಿಕೆ ಕೈಬಿಟ್ಟ ಬಿಜೆಪಿ ಹೈಕಮಾಂಡ್**

# ಮಾಜಿ ಡಿಸಿಎಂ ಈಶ್ವರಪ್ಪಗೆ ಉಚ್ಚಾಟನೆ ಸಾಧ್ಯತೆ?

ಶಿವಮೊಗ್ಗ: ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪ ತಮ್ಮ ಪುತ್ರ ಕೆಇ ಕಾಂತೇಶ್‌ಗೆ ಹಾವೇರಿ ಲೋಕಸಭೆ ಕ್ಷೇತ್ರದ ಟಿಕೆಟ್ ನಿರಾಕರಿಸಿದ್ದರಿಂದ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹಾಗೂ ಬಿಜೆಪಿ ವಿರುದ್ಧ ಮುನಿಸಿಕೊಂಡಿದ್ದು ಇದೀಗ ಶಿವಮೊಗ್ಗದಲ್ಲಿ ಬಿಜೆಪಿ ಅಭ್ಯರ್ಥಿ ಬಿವೈ ರಾಘವೇಂದ್ರ ವಿರುದ್ಧ ಪಕ್ಷೇತ್ತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದಾರೆ.



ಬಿಎಸ್ ವೈ ಕುಟುಂಬದಿಂದ ಬಿಜೆಪಿಯನ್ನು ಮುಕ್ತಗೊಳಿಸಬೇಕು ಎಂದು ಪಣತೊಟ್ಟಿರುವ ಈಶ್ವರಪ್ಪ ಕಳೆದ ವಾರ ತಮ್ಮ ನಾಮಪತ್ರವನ್ನೂ ಸಲ್ಲಿಕೆ ಮಾಡಿದ್ದರು. ಇದರ ಬೆನ್ನಲ್ಲೇ ಬಿವೈ ರಾಘವೇಂದ್ರ ಮುಂದಿನ ದಿನಗಳಲ್ಲಿ ಈಶ್ವರಪ್ಪ ನಾಮಪತ್ರ ವಾಪಸ್ ಪಡೆಯಲಿದ್ದಾರೆ ಎಂದು ಹೇಳಿಕೆ ನೀಡಿದ್ದರು. ಇದರ ಬೆನ್ನಲ್ಲೇ ಬ್ರಹ್ಮನೇ ಬಂದು ಹೇಳಿದರೂ ನಾನು ನಾಮಪತ್ರ ವಾಪಸ್ ಪಡೆಯುವುದಿಲ್ಲ ಎಂದು ಹೇಳುತ್ತಿದ್ದಾರೆ.

ಈ ಹಿಂದೆ ಈಶ್ವರಪ್ಪರಿಗೆ ಹೈಕಮಾಂಡ್ ದೆಹಲಿಗೆ ಬರುವಂತೆ ಬುಲಾವ್ ನೀಡಿತ್ತು. ಆದರೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಈಶ್ವರಪ್ಪರ ಭೇಟಿಗೆ ಅವಕಾಶ ನೀಡದ ಹಿನ್ನೆಲೆಯಲ್ಲಿ ಬೇಸರದಿಂದ ಬಂದಿದ್ದ ಈಶ್ವರಪ್ಪ ನಂತರ ನಾನು ಶಿವಮೊಗ್ಗದಿಂದ ಸ್ಪರ್ಧಿಸೇ ತೀರುತ್ತೇನೆ ಎಂದು ಹಠ ತೊಟ್ಟಿದ್ದಾರೆ.

ಇನ್ನು ಈಶ್ವರಪ್ಪ ಮನವೊಲಿಕೆ ಮಾಡುವ ಕೆಲಸವನ್ನು ಬಿಜೆಪಿ ಹೈಕಮಾಂಡ್ ಕೈಬಿಟ್ಟಿದೆ. ಅಲ್ಲದೆ ಕಾದು ನೋಡುವ ತಂತ್ರ ಅನುಸರಿಸುತ್ತಿದ್ದು ಏಪ್ರಿಲ್ 22ರೊಳಗೆ ಈಶ್ವರಪ್ಪ ನಾಮಪತ್ರ ವಾಪಸ್ ಪಡೆಯದಿದ್ದರೆ ಅವರನ್ನು ಪಕ್ಷದಿಂದ ಉಚ್ಚಾಟಿಸುವ ಕ್ರಮಕ್ಕೆ ಹೈಕಮಾಂಡ್ ಮುಂದಾಗಲಿದೆ ಎಂದು ಹೇಳಲಾಗುತ್ತಿದೆ.

ಈ ಸಂಬಂಧ ಮೊದಲ ಬಾರಿಗೆ ಪ್ರತಿಕ್ರಿಯಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು, ಈಶ್ವರಪ್ಪ ಅವರು ನಾಮಪತ್ರ ವಾಪಸ್ ಪಡೆಯದಿದ್ದರೆ ಪಕ್ಷ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಿದೆ ಎಂದರು.

## ಮತದಾನ ಜಾಗೃತಿಗಾಗಿ ಬೈಕ್ ರ್‍ಯಾಲಿ ನಡೆಸಿದ ಅಧಿಕಾರಿಗಳು

**ಉದಯರಶ್ಮಿ ನ್ಯೂಸ್**

ಸಿಂದಗಿ: ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಎಲ್ಲರೂ ಮತದಾನ ಮಾಡಬೇಕು ಎಂಬ ಕಾರಣಕ್ಕಾಗಿ ಚುನಾವಣಾ ಆಯೋಗ ವಿಭಿನ್ನವಾಗಿ ಜಾಗೃತಿ ಮೂಡಿಸುವ ಕಾರ್ಯ ನಡೆಸುತ್ತಿದೆ ಎಂದು ಸಹಾಯಕ ಚುನಾವಣಾಧಿಕಾರಿ ವಿನಯ ಪಾಟೀಲ್ ಹೇಳಿದರು.

ಪಟ್ಟಣದಲ್ಲಿ ಸ್ವೀಪ್ ಸಮಿತಿ ಯೋಜನೆಯ ಅಡಿಯಲ್ಲಿ ಹಮ್ಮಿಕೊಂಡ ಬೈಕ್ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಾಲೂಕಿನಾದ್ಯಂತ ಈಗಾಗಲೇ ಲೋಕಸಭಾ ಚುನಾವಣೆ ಘೋಷಣೆಯದಾಗಿನಿಂದ ಗ್ರಾಮ ಪಂಚಾಯಿತಿ ಹಂತದಿಂದ ಜಿಲ್ಲಾ ಮಟ್ಟದವರೆಗೆ ಸ್ವೀಪ್ ಚಟುವಟಿ-ಕೆಗಳ ವಿಭಿನ್ನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನರಲ್ಲಿ ಮತದಾನದ ಬಗ್ಗೆ ಜಾಗೃತಿಯನ್ನು ಮೂಡಿಸಲಾಗಿದೆ. ಮತದಾನದ ದಿವಸ ಹೆಚ್ಚಿನ ಜನರನ್ನು ಮತಗಟ್ಟೆಗೆ ಕರೆದುಕೊಂಡು ಬಂದು ಮತ ಚಲಾವಣೆ ಮಾಡಿಸುವುದು ನಮ್ಮ ಗುರಿಯಾಗಿದೆ ಎಂದು ವಿವರಿಸಿದರು.

ಈ ವೇಳೆ ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ಮಾತನಾಡಿದರು.

ಸಹಾಯಕ ಚುನಾವಣಾಧಿಕಾರಿ ವಿನಯ ಪಾಟೀಲ, ಸಿಂದಗಿ ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ, ಆಲಮೇಲ ತಹಶೀಲ್ದಾರ್ ಮಹಾದೇವ ಸಣ್ಣಮುರಿ, ತಾಪಂ ಇಒ ಸುಬ್ರಮಣ್ಯ ಶರ್ಮಾ, ಪುರಸಭೆ ಮುಖ್ಯಧಿಕಾರಿ ಗುರುರಾಜ ಚೌಕಿಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ನಗರದಾದ್ಯಂತ ಬೈಕ್ ಓಡಿಸುವ ಮೂಲಕ ಮತದಾರರಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಡೆಸಿದರು.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

### ರಾಜ ನುಡಿ

ನಮ್ಮನ್ನು ಇಡೀ ಸಂಸಾರ ಶೂನ್ಯವೆಂದರೂ ಪರ್ವಾಗಿಲ್ಲ ನಮ್ಮೊಳಗಿನ ಅಂತರಾತ್ಮ ನಮ್ಮನ್ನು ಶೂನ್ಯವೆನಬಾರದು. ಆ ದಿನ ಮಾತ್ರ ಬದುಕು ದುಸ್ತರವೆನಿಸುವುದು. ಬಾಹ್ಯ ಪ್ರಪಂಚ ನಮ್ಮ ಆಂತರಿಕ ಪ್ರಪಂಚಕ್ಕೆ ಪ್ರಮಾಣಪತ್ರ ಕೊಡುವ ಹಂತಕ್ಕೆ ನಾವು ನಮ್ಮನ್ನು ತೆಗೆದುಕೊಂಡು ಹೋದಾಗ ಮಾತ್ರ ಶೂನ್ಯಕ್ಕೆ ಸಮೀಪಿಸುತ್ತೇವೆ..

–ಡಾ. ರಾಜಶೇಖರ ನಾಗೂರ

## ಜಿಲ್ಲಾಧಿಕಾರಿಗಳಿಂದ ಪ್ರವಾಸಿಗರಿಗೆ ಮತದಾನ ಜಾಗೃತಿ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಭಾನುವಾರ ಪ್ರವಾಸಿಗರ ಸಂಖ್ಯೆ ಹೆಚ್ಚಿರುವುದರಿಂದ ಇಲ್ಲಿಯ ಸಂಗೀತ ಕಾರಂಜಿ ಬಳಿ ಸೇರಿದ್ದ ಸಹಸ್ರಾರು ಪ್ರವಾಸಿಗರಿಗೆ ಮತದಾನ ಜಾಗೃತಿ ಕಾರ್ಯಕ್ರಮ ಜಿಲ್ಲಾಡಳಿತ ವತಿಯಿಂದ ಭಾನುವಾರ ರಾತ್ರಿ ಜರುಗಿತು.



ಜಿಲ್ಲಾಧಿಕಾರಿ ಟಿ.ಭೂಬಾಲನ್ ಹಾಗೂ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ರಿಷಿ ಆನಂದ, ಕಡ್ಡಾಯವಾಗಿ ಎಲ್ಲರೂ ಮತ ಚಲಾಯಿಸಬೇಕು, ಪ್ರಜಾಪ್ರಭುತ್ವ ಆಡಳಿತಕ್ಕಾಗಿ , ದೇಶದ ಅಭಿವೃದ್ಧಿಗಾಗಿ ಎಲ್ಲರೂ ಮತದಾನ ಮಾಡಬೇಕು, ಮತದಾನ ಮಾಡದೇ ತಪ್ಪಿಸಿಕೊಳ್ಳಬಾರದು ಎಂದರು. ಮತದಾನ ಸುಲಲಿತ ನಡೆಯಲು ಜಿಲ್ಲಾಡಳಿತ ಸಜ್ಜಾಗಿದ್ದು, ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಂಡಿದೆ ಎಂದರು.

ವಿಜಯಪುರ ಲೋಕಸಭಾ ಚುನಾವಣಾ ವೆಚ್ಚ ವಿಚಕ್ಷಣಾಧಿಕಾರಿ ಅನುಪಕುಮಾರ, ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ಋಷಿಕೇಷ ಸೋನಾವಾಲೆ, ಸಹಾಯಕ ಚುನಾವಣಾಧಿಕಾರಿ ಗಂಗಪ್ಪ, ರಾಜಶೇಖರ ಪವಾರ, ಸಿ.ಆರ್. ಮುಂಡರಗಿ, ಬಿ.ಎಸ್. ಮೂಗನೂರಮಠ, ರಾಮಣ್ಣ ಮತ್ತಿತರರು ಇದ್ದರು.

ಜಿಲ್ಲಾಧಿಕಾರಿ ಸೇರಿದಂತೆ ಎಲ್ಲರೂ ಮತದಾನ ಮಾಡುವ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

## ಕೃಷಿ ಹೊಂಡದಲ್ಲಿ ಬಿದ್ದು ಬಾಲಕ ಸಾವು


**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ನರಸಲಗಿ ಗ್ರಾಮದ ತೋಟದ ಕೃಷಿ ಹೊಂಡದಲ್ಲಿ ಬಿದ್ದು ಬಾಲಕ ಮೃತಪಟ್ಟ ಘಟನೆ ಸೋಮವಾರ ನಡೆದಿದೆ.



ಮೃತ ಬಾಲಕ ಕುಶಾಲ ವೀರೇಶ ಹಾಲ್ಯಾಳ (6) ಆಟವಾಡುತ್ತಿದ್ದಾಗ ಆಕಸ್ಮಿಕವಾಗಿ ಕಾಲು ಜಾರಿ ಕೃಷಿ ಹೊಂಡಕ್ಕೆ ಬಿದ್ದು ಮೃತಪಟ್ಟಿದ್ದಾನೆ. ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ವಚನ ಚಿಂತನ 356



*ಕಂಗಳ ಮುಂದೆ ಕಂಡಂತೆ ಕಾಣಬಹುದೆ*
*ಮನ ನೆನೆದಂತೆ ಆಡಬಹುದೆ*
*ಕಂಡಕಂಡವರಲ್ಲಿ ಸಂಗವ ಮಾಡಬಹುದೆ*
*ಅದು ಸ್ವಾನುಭಾವರಿಗೆ ಸಲ್ಲದ ಮತ.*
*ಶಿವಪೂಜಕರಲ್ಲಿ ಶಿವಧ್ಯಾನಮೂರ್ತಿಗಳಲ್ಲಿ,*
*ಶಿವಕಥಾಪ್ರಸಂಗಿಗಳಲ್ಲಿ,*
*ಶಿವಾಧಿಕ್ಯವಲ್ಲದೆ ಪೆರತೊಂದನರಿಯದವರಲ್ಲಿ*
*ತನು ಕರಗಿ, ಮನ ಸಲೆಸಂದು, ತ್ರಿವಿಧಪ್ರಸಾದದಲ್ಲಿ*
*ಮಹಾಪ್ರಸಾದಿಯಾಗಿ ನಿಂದು*
*ವ್ರತಾಂಗಕ್ಕೆ ಅಭಂಗ ಅವಿರಳನಾಗಿಪ್ಪ ಸದ್ಭಕ್ತನಂಗವೆ,*
*ಆಚಾರವೆ ಪ್ರಾಣವಾದ ರಾಮೇಶ್ವರಲಿಂಗದ ಸುಖ.*

ಈ ವಚನದಲ್ಲಿ ಅಕ್ಕಮ್ಮನವರು ದೇವರ ನೈಜ ಚಿತ್ರಣವನ್ನು ನಮ್ಮೆದು-ರಿಗೆ ಇಡಲು ಪ್ರಯತ್ನಿಸಿರುವುದನ್ನು ಕಾಣುತ್ತೇವೆ. ವಚನದ ಪ್ರಾರಂಭದ ಸಾಲಿನಲ್ಲಿ ಉಲ್ಲೇಖಿಸಿರುವಂತೆ "ಕಂಗಳ ಮುಂದೆ ಕಂಡಂತೆ ಕಾಣಬಹುದೇ " ಎನ್ನುವಲ್ಲಿ ದೇವರನ್ನು ನಮ್ಮ ಇರುವಿಕೆಯ ಮಟ್ಟಕ್ಕೆ ಅನುಗುಣವಾಗಿ ವ್ಯಕ್ತಿ ,ಪ್ರಾಣಿ, ಹಾಗೂ ವಸ್ತುಗಳ ರೂಪದಲ್ಲಿ ಕಣ್ಣಿಗೆ ಕಾಣುವುದರೊಂದಿಗೆ ಹೋಲಿಸಿಕೊಂಡು ಅದನ್ನೇ ದೇವರೆಂದು ನಂಬಬಹುದೇ? ಮನ ನೆನೆದಂತೆ, ಬೇರೆಯುವರು ಹೇಳಿದ ಮಾತಿನಂತೆ ದೇವರನ್ನು ಕಲ್ಪಿಸಿಕೊಂಡವರೊಂದಿಗೆ ತಾವು ಸಂಗಮಾಡುವುದಿಲ್ಲ ಎನ್ನುವುದರೊಂದಿಗೆ ತಮ್ಮ ಸ್ವಅನುಭವಕ್ಕೆ ಬರದ ಹೊರತು ದೇವರ ಇರುವಿಕೆ ಅರಿವಿಗೆ ಬಾರದು ಎಂದಿದ್ದಾರೆ. ಶಿವಪೂಜೆ, ದ್ಯಾನ, ಕತೆ ಕೇಳಿ ತನುಕರಗಿಸಿ, ಮನ ನಿಲ್ಲಿಸಿ, ಮಹಾಪ್ರಸಾಧಿ ಸ್ಥಲದಲ್ಲಿದ್ದವನಿಗೆ ವ್ರತಗಳ ಅವಶ್ಯಕತೆ ಇರುವುದಿಲ್ಲ. ಅವನ ಅಂಗವೇ ಲಿಂಗವೆಂದಿರುವರು. ಅಂಗದಾಚೆ ವಸ್ತುಗಳಲ್ಲಿ ಲಿಂಗವಿಲ್ಲ. ಎಂಬುದು ವಚನದ ಆಶಯವಾಗಿದೆ. 12ನೇ ಶತಮಾನದಲ್ಲಿ ದೇವರ ಬಗ್ಗೆ ಇಂತಹ ದಿಟ್ಟ ನಿಲುವು ಪ್ರದರ್ಶಿಸಿದ ಶರಣೆಯರ ಈ ಛಲವನ್ನು 21ನೇ ಶತಮಾನದಲ್ಲಿ ನಿರೀಕ್ಷಿಸಬಹುದೆ?.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

**ನಾಗಠಾಣ ವಿಧಾನಸಭೆ ಮತಕ್ಷೇತ್ರದ ಚುನಾವಣೆ ಪ್ರಚಾರ ಸಭೆಯಲ್ಲಿ ಸಚಿವ ಎಂ.ಬಿ.ಪಾಟೀಲ ಅಭಿಮತ**

## ಸಂಸತ್ತಿನಲ್ಲಿ ಧ್ವನಿ ಎತ್ತಲು ಪ್ರೊ.ಆಲಗೂರ ಗೆಲುವು ಅಗತ್ಯ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ಸಮಸ್ಯೆಗಳ ಬಗ್ಗೆ ಸಂಸತ್ತಿನಲ್ಲಿ ಧ್ವನಿ ಎತ್ತಿ ಕೇಂದ್ರದ ಗಮನ ಸೆಳೆಯಲು ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರನ್ನು ಬಹುಮತದಿಂದ ಗೆಲ್ಲಿಸುವುದು ಅಗತ್ಯವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.



ರವಿವಾರ ನಗರದ ಐಶ್ವರ್ಯ ನಗರದಲ್ಲಿ ನಾಗಠಾಣ ವಿಧಾನಸಭೆ ಮತಕ್ಷೇತ್ರದ ಚುನಾವಣೆ ಪ್ರಚಾರ ಸಭೆಯನ್ನು ಉದ್ಘಾಟಿಸಿದ ಅವರು, ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಪರ ಮತಯಾಚಿಸಿ ಮಾತನಾಡಿದರು.

ದೇಶದಲ್ಲಿ ಬದಲಾವಣೆ ಮಾಡುವುದಾಗಿ 2014 ರಲ್ಲಿ ಮೋದಿ ದೊಡ್ಡ ಪ್ರಚಾರ ಮಾಡಿ ಅಧಿಕಾರಕ್ಕೆ ಬಂದರು. ಆದರೆ, ಕಳೆದ 10 ವರ್ಷಗಳಲ್ಲಿ ಅವರು ನೀಡಿರುವ ಯಾವ ಭರವಸೆಗಳೂ ಈಡೇರಿಲ್ಲ. ಅಚ್ಛೆ ದಿನ್, ಕಪ್ಪು ಹಣ ವಾಪಸ್, ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿ ಸೇರಿದಂತೆ ಯಾವುದೂ ಈಡೇರಿಲ್ಲ. ಬದಲಾಗಿ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ, ಅಡುಗೆ ಅನಿಲ ಬೆಲೆ ಹೆಚ್ಚಳ, ರೈತರ ಆದಾಯ ಕುಂಠಿತ ಇವರು ಜನ-ರಿಗೆ ನೀಡಿರುವ ಅಚ್ಛೇ ದಿನ್ ಗಳಾಗಿವೆ. ಕಾಂಗ್ರೆಸ್ ಹಸಿರು ಕ್ರಾಂತಿ ಮೂಲಕ ಜನರಿಗೆ ಆಹಾರ ನೀಡಿತು. ನೆಹರೂ, ಶಾಸ್ತ್ರಿ, ಇಂದಿರಾ ಗಾಂಧಿ, ರಾಜೀವ ಗಾಂಧಿ, ಮನಮೋಹನಸಿಂಗ್ ಆರ್ಥಿಕಾಭಿವೃದ್ಧಿ, ಶೈಕ್ಷಣಿಕಾಭಿವೃದ್ಧಿ, ಕೃಷಿ ಅಭಿವೃದ್ಧಿಗೆ ಭದ್ರ ಬುನಾದಿ ಹಾಕಿದರು. ಆದರೆ, ಬಿಜೆಪಿ ಜನರನ್ನು ತಪ್ಪು ದಾರಿಗೆ ಎಳೆಯುವ ಕೆಲಸ ಮಾಡಿದೆ. ಮನಮೋಹನಸಿಂಗ್ ಪ್ರಧಾನಿಯಾಗಿದ್ದಾಗ ರೈತರ ಸಾಲ ಮನ್ನಾ, ರೈಟ್ ಟು ಎಜುಕೇಶನ್ ಸೇರಿದಂತೆ ನಾನಾ ಬಡವರ ಪರ ಯೋಜನೆ ಜಾರಿಗೆ ತಂದಿತು. ಆದರೆ, ಪ್ರಧಾನಿ ನರೇಂದ್ರ ಮೋದಿ ಅವರು ಹೇಳುವ ಮನ್ ಕಿ ಬಾತ್, ಅಚ್ಛೆ ದಿನ್, ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ನಾ ಖಾವೂಂಗಾ, ನಾ ಖಾನೆ ದೂಂಗಾ ನಂಥ ವಿಚಾರಗಳು ಕೇವಲ ಸ್ಲೋಗನ್ ಗೆ ಮಾತ್ರ ಸೀಮಿತವಾಗಿವೆ. ಚುನಾವಣೆ ಬಾಂಡ್ ಹಗರಣ ಇವರ ಮುಖವಾಡ ಕಳಚುವಂತೆ ಮಾಡಿದೆ. ಹೇಳುವುದು ಒಂದು, ಮಾಡುವುದು ಮತ್ತೊಂದು. ಇದನ್ನು ಹೇಳುವವರ ಆತ್ಮಸಾಕ್ಷಿ ಒಪ್ಪುತ್ತಾ ಎಂದು ಸಚಿವರು ಪ್ರಶ್ನಿಸಿದರು.

ಸಂಸದ ರಮೇಶ ಜಿಗಜಿಣಗಿ ಅವರು ಆರು ಬಾರಿ ಆಯ್ಕೆಯಾಗಿದ್ದಾರೆ. ಕೇಂದ್ರದ ವ್ಯಾಪ್ತಿಗೆ ಬರುವ ಜಿಲ್ಲೆಯ ಯಾವ ಜ್ವಲಂತ ಸಮಸ್ಯೆಗಳನ್ನೂ ಬಗೆಹರಿಸಿಲ್ಲ. ಸಂಸತ್ತಿನಲ್ಲಿ ಅವುಗಳ ಬಗ್ಗೆ ಒಂದೂ ಪ್ರಶ್ನೆ ಕೇಳಿಲ್ಲ. ಹೀಗಾಗಿ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಆಯ್ಕೆ ಅಗತ್ಯವಾಗಿದೆ. ಆಲಗೂರ ಅವರು ಸಂಸದರಾಗಿ ಆಯ್ಕೆಯಾದ ಮೇಲೆ ಆಲಮಟ್ಟಿ ಜಲಾಷಯದ ಎತ್ತರ ಹೆಚ್ಚಳ ಕುರಿತು ಗೆಜೆಟ್ ನೊಟಿಫಿಕೇಶನ್ ಮಾಡಿಸಲು, ವಂದೇ ಭಾರತ ರೈಲು ಸೇವೆ ಪ್ರಾರಂಭಿಸಲು, ತೋಟಗಾರಿಕೆ, ಪ್ರವಾದೋದ್ಯಮ, ಸೇರಿದಂತೆ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಯ ಕು-ರಿತು ಸಂಸತ್ತಿನಲ್ಲಿ ಧ್ವನಿ ಎತ್ತಿ ಕೆಲಸ ಮಾಡಲಿದ್ದಾರೆ. ಅವರನ್ನು ಮತ ಹಾಕಿದರೆ ನನಗೆ ಮತ ಹಾಕಿದಂತೆ ಎಂದು ಎಂ. ಬಿ. ಪಾಟೀಲ ಹೇಳಿದರು.

ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ ಮಾತನಾಡಿ, ರಾಜಧಾನಿ ಬೆಂಗಳೂರಿನಲ್ಲಿ ಕುಡಿಯುವ ನೀರಿಗೆ ಹಾಹಾಕಾರವಿದೆ. ಆದರೆ, ಭೀಕರ ಬರದ ನಡುವೆಯೂ ವಿಜಯಪುರ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿಲ್ಲ. ಇದಕ್ಕೆ ಸಚಿವ ಎಂ. ಬಿ. ಪಾಟೀಲ ಅವರು ಕೈಗೊಂಡಿರುವ ನೀರಾವರಿ ಯೋಜನೆಗಳೇ ಕಾರಣವಾಗಿವೆ. ಈ ಭಾಗದಲ್ಲಿ ಇನ್ನೂ ಬಾಕಿ ಇರುವ ನೀರು, ವಿದ್ಯುತ್, ರಸ್ತೆ ದುರಸ್ಥಿ ಚುನಾವಣೆ ನಂತರ ಕೈಗೆತ್ತಿಕೊಳ್ಳಲಾಗುವುದು. ಎಂದು ಹೇಳಿದರು.

ಕೆಪಿಸಿಸಿ ಮುಖಂಡ ಸಂಗಮೇಶ ಬಬಲೇಶ್ವರ ಮಾತನಾಡಿ, ಸಚಿವ ಎಂ. ಬಿ. ಪಾಟೀಲರು ಬರದ ನಾಡಾಗಿದ್ದ ವಿಜಯಪುರ ಜಿಲ್ಲೆಯನ್ನು ಬಂಗಾರದ ನಾಡನ್ನಾಗಿ ಮಾಡಿದ್ದಾರೆ. ಈ ಬಾರಿ ಸುಶಿಕ್ಷಿತ ಪ್ರೊ.ರಾಜು ಆಲಗೂರ ಅವರನ್ನು ಗೆಲ್ಲಿಸುವ ಮೂಲಕ ಹೊಸ ಅಭಿವೃದ್ಧಿಗೆ ಕೈಜೋಡಿಸೋಣ ಎಂದು ಹೇಳಿದರು.

ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಮಾತನಾಡಿ ಮತ ಯಾಚಿಸಿದರು.

ನಿವೃತ್ತ ನೌಕರರ ಸಂಘದ ಮುಖಂಡ ಎಸ್. ಪಿ. ಬಿರಾದಾರ ಕಡ್ಲೆವಾಡ ಮಾತನಾಡಿದರು.


ಈ ಸಂದರ್ಭದಲ್ಲಿ ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವಿದ್ಯಾರಾಣಿ ತುಂಗಳ, ಮುಖಂಡೆ ಸ್ನೇಹಲತಾ ಶೆಟ್ಟಿ, ಉದ್ಯಮಿ ರವೀಂದ್ರ ಬಿಜ್ಜರಗಿ ಮಾತನಾಡಿ, ಪ್ರೊ.ರಾಜು ಆಲಗೂರ ಪರ ಮತಯಾಚಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಿ.ಎಸ್.ಬಿರಾದಾರ, ನಾಗಠಾಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಹಜಹಾನ್ ಮುಲ್ಲಾ ಮುಂತಾದವರು ಉಪಸ್ಥಿತರಿದ್ದರು.

## ಕಾಂಗ್ರೆಸ್ ಅಭ್ಯರ್ಥಿ ಪ್ರೊ.ಆಲಗೂರ ನಾಮಪತ್ರ ಸಲ್ಲಿಕೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಅವರು ಸೋಮವಾರ ನಾಮಪತ್ರ ಸಲ್ಲಿಸಿದರು.



ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಅವರು, ಜಿಲ್ಲಾ ಚುನಾವಣಾಧಿಕಾರಿ ಟಿ. ಭೂಬಾಲನ್ ಅವರಿಗೆ ತಮ್ಮ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ, ಸಕ್ಕರೆ ಸಚಿವ ಶಿವಾನಂದ ಎಸ್. ಪಾಟೀಲ, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ ಅಧ್ಯಕ್ಷ ಮತ್ತು ಮುದ್ದೇಬಿಹಾಳ ಶಾಸಕ ಸಿ. ಎಸ್. ನಾಡಗೌಡ, ಇಂಡಿ ಶಾಸಕ ಯಶವಂತರಾಯಗೌಡ ವಿ. ಪಾಟೀಲ, ಉಪಸ್ಥಿತರಿದ್ದರು.

ಎರಡನೇ ಸೆಟ್ ನಲ್ಲಿ ನಾಮಪತ್ರ ಸಲ್ಲಿಸುವ ವೇಳೆ ನಾಗಠಾಣ ಶಾಸಕ ವಿಠ್ಠಲ ಧೋಂಡಿಬಾ ಕಟಕದೊಂಡ, ಅಶೋಕ ನ್ಯಾಮಗೊಂಡ, ಮುಖಂಡರಾದ ಅಬ್ದುಲ್ ಹಮೀದ್ ಮುಶ್ರಿಫ್, ಪೂಜಾರಿ ಉಪಸ್ಥಿತರಿದ್ದರು.

## ವಿಶ್ವಕ್ಕೆ ಆಧುನಿಕ ಸ್ಪರ್ಶ ನೀಡಿದ ಚಿತ್ರಕಲಾವಿದರು :ಡಾ.ಅನುರಾಧ



**ಉದಯರಶ್ಮಿ ನ್ಯೂಸ್**

ವಿಜಯಪುರ: ಜಗತ್ಪಸಿದ್ಧ ಕಲಾವಿದ ಲಿಯೋನಾರ್ಡ್ ಡಾ ವಿಂಚಿ ಕೇವಲ ಒಬ್ಬ ಕಲಾವಿದ ಅಲ್ಲದೆ ಪ್ರಖ್ಯಾತ ವಾಸ್ತುಶಿಲ್ಪಿ, ಅಂಗರಚನಾ ತಜ್ಞರಾಗಿದ್ದು, ವೈದ್ಯಕೀಯ ಕ್ಷೇತ್ರದಲ್ಲಿ ತನ್ನದೆ ಆದ ಮಹತ್ವದ ಸೇವೆ ಸಲ್ಲಿಸಿದ ಶ್ರೇಷ್ಠ ಕಲಾವಿದ ಇತಿಹಾಸಕಾರರಾಗಿದ್ದರು ಎಂದು ಡಾ. ಫ. ಗು ಹಳಕಟ್ಟಿ ಇಂಜಿನಿಯರಿಂಗ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಡಾ. ಅನುರಾಧಾ ಟಂಕಸಾಲಿ ಹೇಳಿದರು.

ಸೋಮವಾರ ನಗರದ ಆರ್ಟ್ ಗ್ಯಾಲರಿಯಲ್ಲಿ ನಡೆದ ವಿಶ್ವದೃಶ್ಯಕಲಾ ದಿನಾಚರಣೆಯ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ನಮ್ಮ ದೇಶದ ಪ್ರಖ್ಯಾತ ಕಲಾವಿದ ರಾಜಾ ರವಿವರ್ಮ ಅವರ ಜನ್ಮದಿನವನ್ನು ನಮ್ಮ ದೇಶದ ಕಲಾ ದಿನವನ್ನಾಗಿ ಆಚ-ರಿಸಬೇಕೆಂದು ಸಲಹೆ ನೀಡಿದರು.

ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಭಜಂತ್ರಿ ಮತನಾಡಿ, ಕಲಾವಿದರು ಸರ್ವ ಸ್ವತಂತ್ರರು. ಕವಿ ಕಾಣದನ್ನು ಕಲಾವಿದ ಕಂಡಹಾಗೆ ಸಮಾಜಕ್ಕೆ ತನ್ನದೆ ದೃಶ್ಯಭಾಷೆಯಲ್ಲಿ ಸಂದೇಶಗಳನ್ನು ನೀಡುತಿದ್ದಾರೆ. ಅವರು ನಿಜವಾದ ಸಮಾಜದ ಆಸ್ತಿ ಎಂದರು.

ಕಲಾವಿದ ರಾಜಾ ರವಿವರ್ಮ ಅವರ ಜನ್ಮದಿನಾಚರಣೆಗೆ ಸಂಪೂರ್ಣ ಸಹಾಯ ನೀಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದ ಅದ್ಯಕ್ಷತೆ ವಹಿಸಿದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಕಲಾವಿದ ಪಿ.ಎಸ್.ಕಡೆಮನಿ ಮಾತನಾಡಿ, ಜಗತ್ತುಕಂಡ ಶ್ರೇಷ್ಠ ಕಲಾವಿದ ಲಿಯೋನಾರ್ಡ್ ಡಾ. ವಿಂಚಿ ಅವರ ಜನ್ಮದಿನವನ್ನು ವಿಶ್ವ ದೃಶ್ಯಕಲಾ ದಿನವನ್ನಾಗಿ ಜಗತ್ತಿನ ಎಲ್ಲ ದೇಶಗಳಲ್ಲಿ ಆಚರಿಸಲಾಗುತ್ತಿದೆ. ನಾವೆಲ್ಲರು ಕಲಾವಿದರಾಗಿ ಅವರ ಆದರ್ಶಗಳನ್ನು ಪಾಲಿಸಿದರೆ, ಉತ್ತಮ ಕಲಾವಿದರಾಗಲು ಸಹಕಾರಿಯಾಗುತ್ತದೆ ಎಂದರು.

ಚಿತ್ರ ರಚಿಸುವ ಮೂಲಕ ಹಿರಿಯ ಕಲಾವಿದ ಎಸ್.ಟಿ ಕೆಂಭಾವಿ ಕಾರ್ಯಕ್ರಮ ಉದ್ಘಾಟಿಸಿದರು.

ಹಿರಿಯ ಕಲಾವಿದ ವಿದ್ಯಾಧರ ಸಾಲಿ ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಕ್ಯಾನವಾಸ ಆರ್ಟ್ ಫೌಂಡೇಶನ್ ಕಾರ್ಯದರ್ಶಿ ರಮೇಶ ಚವ್ಹಾಣ ಕಾರ್ಯಕ್ರಮ ನಿರೂಪಿಸಿದರು.

ಕಲಾಶಿಬಿರದಲ್ಲಿ ಕಲಾವಿದರಾದ ಪಿ.ಎಸ್.ಕಡೆಮನಿ, ವಿದ್ಯಾಧರ ಸಾಲಿ, ವಿ.ವಿ.ಹಿರೇಮಠ, ಬಿ.ಎಸ್.ಪಾಟೀಲ್, ಡಾ.ಶಶಿಕಲಾ ಹೂಗಾರ, ಶಿವಾನಂದ ಅಥಣಿ, ನಯಿಮ್ ನಾಗಠಾಣ, ಸಿದ್ದು ಬಳುಲಗಿಡದ, ಯಾಮಿನಿ ಶಹಾ, ರವಿ ಮುದಗಲ್ಲ, ಮಹಾದೇವಿ ಕೊಪ್ಪದ, ಮದನ ವಗ್ಯಾನವರ, ಲಿಂಗರಾಜ ಕಾಚಾಪೂರ ದಾಕ್ಷಾಯಣಿ ಇಮನಾದ, ಶಬ್ಬಿರ ನದಾಫ್, ರಮೇಶ ಚವ್ಹಾಣ, ವಿಶ್ವನಾಥ ಅಗಸರ, ಸಚಿನ ಚವ್ಹಾಣ, ಭಾಗವಹಿಸಿ ಎರಡು ದಿನಗಳ ಕಾಲ ಕಲಾಕೃತಿಗಳನ್ನು ರಚಿಸುವರು.

ಕಾರ್ಯಕ್ರಮದಲ್ಲಿ ಕಲಾವಿದರಾದ ಎಂ.ಕೆ.ಪತ್ರಾರ, ಕಮಲೇಶ ಬಜಂತ್ರಿ, ಪ್ರಶಾಂತ ಮನಗೂಳಿ, ಗಂಗಾಧರ ಮಾಯಾಚಾರಿ ಉಪಸ್ಥಿತರಿದ್ದರು.

## ಕಾಂಗ್ರೆಸ್ ಚುನಾವಣೆ ಪ್ರಚಾರ ಕಾರ್ಯಾಲಯ ಉದ್ಘಾಟನೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಚುನಾವಣೆ ಪ್ರಚಾರ ಕಾರ್ಯಾಲಯವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಉದ್ಘಾಟಿಸಿದರು.

ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರ ಚುನಾವಣೆ ಪ್ರಚಾರ ಚಟುವಟಿಕೆಗಳಿಗಾಗಿ ಈ ಕಾರ್ಯಾಲಯ ಪ್ರಾರಂಭಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ ಶಾಸಕ ಪ್ರಕಾಶ ರಾಠೋಡ, ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ, ನಾಗಠಾಣ ಶಾಸಕ ವಿಠ್ಠಲ ಧೋಂಡಿಬಾ ಕಟಕದೊಂಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಂ. ಎಸ್. ಲೋಣಿ, ಉಪಾಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ, ಕೆಪಿಸಿಸಿ ಕಾರ್ಯದರ್ಶಿ ಸಂಗಮೇಶ ಬಬಲೇಶ್ವರ, ಮಾಜಿ ಶಾಸಕರಾದ ಶರಣಪ್ಪ ಸುಣಗಾರ, ಡಾ. ಮಕ್ಬೂಲ ಬಾಗವಾನ, ಕಾಂಗ್ರೆಸ್ ಮುಖಂಡರಾದ ಅಬ್ದುಲ್ ಹಮೀದ್ ಮುಶ್ರಿಫ್, ವಸಂತ ಹೊನಮೋಡೆ, ಹೊನಮಲ್ಲ ಸಾರವಾಡ, ಸುರೇಶಗೌಡ ಪಾಟೀಲ, ಚಂದ್ರಕಾಂತ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ಕುಡಿವ ನೀರೊದಗಿಸಲು ಗ್ರಾಪಂ ಸದಸ್ಯ ಅಪ್ಪುಗೌಡ ಅವಿರತ ಶ್ರಮ

**ಉದಯರಶ್ಮಿ ನ್ಯೂಸ್**

-ಮಲಿಕ್.ಎಲ್.ಜಮಾದಾರ





" ಬೇಸಿಗೆಯಲ್ಲಿ ಜನರಿಗೆ ಜೀವ ಜಲ ನೀರನ್ನು ಒದಗಿಸುವುದು ಪುಣ್ಯದ ಕೆಲಸ. ಅದರಂತೆ ಜಿಲ್ಲಾಡಳಿತದ ಕಟ್ಟುನಿಟ್ಟಿನ ಆದೇಶವನ್ನು ಪಾಲಿಸುತ್ತಿದ್ದೇನೆ. ಇದು ನನ್ನ ಕರ್ತವ್ಯವು ಕೂಡ ಹೌದು. ಗ್ರಾಮದ ಎಲ್ಲ ವಸ್ತಿ ಪ್ರದೇಶಕ್ಕೆ ಟ್ಯಾಂಕರ್ ಮೂಲಕ ಸಮರ್ಪಕವಾಗಿ ನೀರನ್ನು ಪೂರೈಕೆ ಮಾಡಲಾಗುತ್ತಿದೆ."

–ಅಪ್ಪುಗೌಡ ಚ. ಪಾಟೀಲ ನಂದರಗಿ ಗ್ರಾಪಂ ಸದಸ್ಯರು

ವಿಜಯಪುರ: ಈ ವರ್ಷ ಬಿಸಿಲಿನ ತಾಪಮಾನ ಹೆಚ್ಚಾಗಿದ್ದು ಎಲ್ಲೆಂದರಲ್ಲಿ ಝಳವೋ ಝಳ. ಇದರಿಂದ ನೀರಿನ ಆಕರಗಳು ಒಣಗಿ ಹೋಗಿವೆ. ಜನ ಜೀವನಕ್ಕೆ ನೀರಿನ ಅಭಾವದಿಂದ ಅಸ್ತವ್ಯಸ್ತ ಉಂಟಾಗಿದೆ. ಇಂತಹ ಬೇಸಿಗೆಯಲ್ಲಿ ನೀರಿನ ಹಾಹಾಕಾರ ಮತ್ತಷ್ಟು ತಾರಕ್ಕೇರಿದೆ. ಜನ ಜಾನುವಾರುಗಳಿಗೆ ನೀರಿನ ಅಭಾವದಿಂದಾಗಿ ಗ್ರಾಮದ ಸುತ್ತಮುತ್ತಲಿನ ವಸ್ತಿ ಪ್ರದೇಶಗಳಲ್ಲಿ ನೀರನ್ನು ಪೂರೈಸಲು ನಂದರಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಧುಮಕನಾಳ ಗ್ರಾಮದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವತಃ ಗ್ರಾಮ ಪಂಚಾಯತಿ ಸದಸ್ಯರೇ ಜನರ ನೀರಿನ ಬವಣೆಯನ್ನು ನೀಗಿಸುವಲ್ಲಿ ಮುಂದಾಗಿದ್ದಾರೆ. ನಿತ್ಯ ಹಲವು ವಸ್ತಿ ಪ್ರದೇಶಗಳಿಗೆ ಖುದ್ದಾಗಿ ನಿಜಕ್ಕೂ ಮೆಚ್ಚುಗೆಗೆ ಪಾತ್ರವಾಗಿದೆ ಎಂದಿದ್ದಾರೆ.

ಜನಸೇವೆಯೇ ಜನಾರ್ದನ ಸೇವೆ ಎಂಬಂತೆ ಬಿಸಿಲಿನ ಹಂಗಿಲ್ಲದೆ

" ಅಪ್ಪುಗೌಡ್ರು ಬೇಸಿಗೆಯಲ್ಲಿ ನಿತ್ಯವೂ ನೀರನ್ನು ಪೂರೈಸುತ್ತಿದ್ದಾರೆ. ನಮ್ಮ ನೂರಾರು ಕುರಿಗಳಿಗೆ ಮತ್ತು ಜನ ಜೀವನಕ್ಕೆ ತುಂಬಾ ಅನುಕೂಲವಾಗಿದೆ ಇದರಿಂದ ನಮ್ಮ ನೀರಿನ ದಾಹ ತಣಿಸಿದಂತಾಗಿದೆ. ಅವರು ಬೆಳಗಿನಿಂದ ನೀರು ಪೂರೈಸುವಲ್ಲಿ ತೊಡಗುತ್ತಾರೆ. ಇವರ ಸೇವೆ ಶ್ಲಾಘನೀಯವಾದದ್ದು."

– ಕುರಿಗಾಹಿ ದಸ್ತಗೀರಸಾಬ ದಾ.ಶೇಖ್ ಗ್ರಾಮಸ್ಥ

ತಾವೇ ಟ್ಯಾಂಕರ್ ಮೂಲಕ ನೀರನ್ನು ಪೂರೈಸುತ್ತಿದ್ದಾರೆ. ಇದೆಲ್ಲವನ್ನೂ ಗಮನಿಸಿದ ಗ್ರಾಮಸ್ಥರು ಇವರ ಸೇವೆ ನಿರಂತರ ಜನರ ದಾಹ ತಣಿಸುವಲ್ಲಿ ಮುಂದಾಗಿದ್ದಾರೆ. ಜನಪ್ರತಿನಿಧಿಗಳು ಕುಂತಲ್ಲೆ ಪರೋಕ್ಷವಾಗಿ ಜನಸೇವೆ ಮಾಡುವ ಈ ದಿನಮಾನದಲ್ಲಿ ಇವರು ಪ್ರತ್ಯಕ್ಷವಾಗಿ ಈ ಸೇವೆಗೆ ಮುಂದಾಗಿದ್ದು ನಿಜಕ್ಕೂ ಶ್ಲಾಘನೀಯವಾದದ್ದಾಗಿದೆ.

ಬೇಸಿಗೆಯಲ್ಲಿ ಬಿಸಿಲಿನ ತಾಪಮಾನ ತತ್ತರಿಸಿದ ಜನತೆಗೆ ಕುಡಿಯಲು ನೀರು ಸರಬರಾಜು ಮಾಡುತ್ತಿದ್ದಾರೆ. ಭೀಮಾನದಿಯ ನದಿಯಿಂದ ಸುಮಾರು 30 ಕಿ.ಮಿ ಅಂತರದಲ್ಲಿದ್ದು ಯಾವುದೇ ನೀರಿನ ಆಕರಗಳಿಲ್ಲ. ಇತ್ತ ಬೋರವೆಲ್ 1000 ಫೂಟ್ ಆಳವನ್ನು ಕೊರೆಸಿದರೂ ಬಾರದ ನೀರು, ಇದರಿಂದ ಜನರು ಹೈರಾಣಾಗಿದ್ದಾರೆ. ವಸ್ತಿ ಪ್ರದೇಶಗಳಿಗೆ ನೀರಿನ ಅತೀವ ಕೊರತೆ ಇದ್ದು, ಇದೆಲ್ಲವನ್ನೂ ಗಮನಿಸಿದ ವಿಜಯಪುರ ಜಿಲ್ಲಾಡಳಿತದಿಂದ ಅಲ್ಲೆಲ್ಲ ಟ್ಯಾಂಕರ ಮೂಲಕ ನೀರು ಪೂರೈಸಲು ಆದೇಶಿಸಲಾಗಿದೆ.

ಆದರೆ ಇಲ್ಲಿ ಈ ಗ್ರಾಮದ ಸುತ್ತಮುತ್ತಲಿನ ವಸ್ತಿ ಪ್ರದೇಶಗಳಿಗೆ ಖುದ್ದಾಗಿ ಗ್ರಾಮ ಪಂಚಾಯತಿ ಸದಸ್ಯರೇ ಫೀಲ್ಡಿಳಿದು ನೀರಿನ ಬವಣೆ ನೀಗಿಸುತ್ತಿದ್ದಾರೆ. ಇಂತಹ ಜನಪ್ರತಿನಿಧಿ ಪಡೆದ ನಾವೇ ಧನ್ಯರು ಎನ್ನುತ್ತಾರೆ ಇಲ್ಲಿನ ಜನ.

## ಚಡಚಣದಲ್ಲಿ ಪೋಲಿಸರು-ಯೋಧರಿಂದ ಪಥಸಂಚಲನ

**ಉದಯರಶ್ಮಿ ನ್ಯೂಸ್**




ಚಡಚಣ: ಲೋಕಸಭಾ ಚುನಾವಣೆಯನ್ನು ಅತ್ಯಂತ ಯಶಸ್ವಿಯಾಗಿ ಮತ್ತು ಅಚ್ಚುಕಟ್ಟಾಗಿ ನಿರ್ವಹಿಸಲು ಭಾರತೀಯ ಅರೆ ಸೇನಾ ಪಡೆಯ ಯೋಧರು ಹಾಗೂ ಸ್ಥಳೀಯ ಪೊಲೀಸರು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ರವಿವಾರ ಪಥಸಂಚಲನ ನಡೆಸಿದರು.

ಪ್ರೋಬೆಷನರಿ ಎಸ್‌ಪಿ ಕುಮಾರಿ ಶಾಲು ಅವರ ನೇತ್ರತ್ವದಲ್ಲಿ ಪಥಸಂಚಲನ ನಡೆಯಿತು.

ಶಾಂತಿ, ಸುವ್ಯವಸ್ಥಿತವಾಗಿ ಚುನಾವಣೆ ನಡೆಸುವ ಹಿನ್ನಲೆಯಲ್ಲಿ ಸಾರ್ವಜನಿಕರಿಗೆ ಧೈರ್ಯ ತುಂಬಿ, ಚುನಾವಣಾ ಜಾಗೃತಿ ಮೂಡಿಸುವ ಸಲುವಾಗಿ ಹಾಗೂ ಮುಂಜಾಗೃತೆಯ ಕ್ರಮವಾಗಿ ಈ ಪಥಸಂಚಲನ ನಡೆಯಿತು. ಲೋಕಸಭಾ ಚುನಾವಣಾ ನಿಮಿತ್ಯ ಚಡಚಣ ತಾಲೂಕಿನಲ್ಲಿ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ನಿಟ್ಟಿನಲ್ಲಿ ಬೆಟಾಲಿನ್ 1ರ ಸೈನಿಕರು ಹಾಗೂ ಸ್ಥಳೀಯ ಪೊಲೀಸರಿಂದ ಪಥಸಂಚಲನ ಜಾಗೃತಿ ನಡೆಯಿತು.

ಈ ಸಂದರ್ಭದಲ್ಲಿ ಬೆಟಾಲಿನ್ 1ರ ಕಮಾಂಡೆಂಟ ಸೌರಭ, ಚಡಚಣ ಸಿಪಿಐ ಎಚ್.ಡಿ. ಮುಲ್ಲಾ, ಪಿಎಸ್ಐ ರಾಘವೇಂದ್ರ ಖೋತ ಹಾಗೂ ಸ್ಥಳೀಯ ಠಾಣೆಯ ಪೊಲೀಸರು ಪಥಸಂಚಲದಲ್ಲಿ ಪಾಲ್ಗೊಂಡಿದ್ದರು.

## ಮಡಿವಾಳ ಮಾಚಿದೇವ ಒಬ್ಬ ಲೋಕಚಿಂತಕ :ಗೊ.ರು.ಚ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಮಡಿವಾಳ ಮಾಚಿದೇವ ಒಬ್ಬ ಲೋಕಚಿಂತಕ. ಅವನ ಜನ್ಮಭೂಮಿ ಅಭಿವೃದ್ಧಿಗೆ ಜಾತಿ, ಮತವೆನ್ನದೇ ಎಲ್ಲರೂ ಒಂದಾಗಿ ನಿಂತಿರುವುದು ನಿಜವಾಗಿಯೂ ಶ್ಲಾಘನೀಯ ಎಂದು ಜಾನಪದ ವಿದ್ವಾಂಸ ಗೊ.ರು.ಚನ್ನಬಸಪ್ಪ ಹೇಳಿದರು.

ಪಟ್ಟಣದ ಮಡಿವಾಳ ಮಾಚಿದೇವರ ದೇವಸ್ಥಾನಕ್ಕೆ ಭಾನುವಾರ ಭೇಟಿ ನೀಡಿ ಸದಯ್ಯನಮಠದಲ್ಲಿ ಜರುಗಿದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ನಾವು ಮಾಡುವ ಕಾರ್ಯ ನಮ್ಮನ್ನು ನೆನೆಸುವಂತಿರಬೇಕು. ಆಗ ಮಾತ್ರ ನಮಗೆ ಇರುವಿಕೆಗೆ ನಿಜವಾದ ಅರ್ಥ. ಇಂದು ಮಡಿವಾಳ ಮಾಚಿದೇವನ ಕುರಿತು ಉತ್ಕೃಷ್ಟ ಸಾಹಿತ್ಯಕ ಗ್ರಂಥ ರಚನೆಯಾಗಬೇಕಾಗಿದೆ. ಭಾವನೆಗಳ ಮೂಲಕ ನಾವೆಲ್ಲ ಕೂಡಿ ಕಾರ್ಯಕಾಡುವ ಕೆಲಸಕ್ಕೆ ಖಂಡಿತ ಯಶಸ್ಸು ದೊರೆಯುತ್ತದೆ ಆದ್ದರಿಂದ ಮುಂದಿನ ದಿನಗಳಲ್ಲಿ ಪಟ್ಟಣದ ಪ್ರಮುಖರು ಮಾಚಿದೇವನ ಹೆಸರಲ್ಲಿ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಮುಂದಾಗಬೇಕು. ನಮ್ಮ ರಚನ ಮತ್ತು ವಚನಗಳ ಮೂಲಕ ಏನೆಲ್ಲಾ, ಹೇಗೆ? ಸಾಧನೆ ಮಾಡಬಹುದು ಎಂಬುದರ ಕುರಿತು ಮಾರ್ಮಿಕವಾಗಿ ಹೇಳಿದರು.

ಸಮಾಜ ಚಿಂತಕ ಅಶೋಕ ದೊಮ್ಮಲೂರು ,ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಸ್.ಎನ್.ಬಸವರಡ್ಡಿ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಸಿ.ಕೆ.ಕುದರಿ, ಬಿ.ಕೆ.ಪಾಟೀಲ, ಜಿ.ಬಿ.ಸಾಲಕ್ಕಿ, ಕಾಶೀನಾಥ ತಳಕೇರಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಬಸ್ ನಿಲ್ದಾಣದ ನಾಮಕರಣಕ್ಕೆ ಶ್ರಮಿಸಿದ ಬಸನಗೌಡ ಪಾಟೀಲರನ್ನು ಗೆಳೆಯರ ಬಳಗದಿಂದ ಸನ್ಮಾನಿಸಲಾಯಿತು.

ಸದಯ್ಯನಮಠದ ವೀರಗಂಗಾಧರ ಶ್ರೀಗಳು ಸಭೆಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಮಾಜಿಅಧ್ಯಕ್ಷ ಮ.ಗು. ಯಾದವಾಡ, ಬಾಬುಗೌಡ ಪಾಟೀಲ (ಜಿಡ್ಡಿಮನಿ), ಕೆ.ಸಿ.ಮಠ, ಎಂ.ಆರ್.ಶಿರಸಂಗಿಮಠ, ಶಾಂತಗೌಡ ಯರನಾಳ, ತಾಲ್ಲೂಕು ಕಸಾಪ ಅಧ್ಯಕ್ಷ ಜಿ.ಪಿ.ಬಿರಾದಾರ, ನಾನಾಗೌಡ ಪಾಟೀಲ, ವೀರೇಶ ಕುದರಿ, ಹುಸೇನ್ ಗೌಂಡಿ, ಕೆ.ಎಂ.ನಂದಿ, ನಾಗಯ್ಯ ಹಿರೇಮಠ, ಮಹಾಂತಯ್ಯ ಮಠಪತಿ, ಪ್ರಕಾಶ ನಾಯಿಕ, ಗೊಲ್ಲಾಳ ಬಿರಾದಾರ, ರಾಮಯ್ಯ ನಾಶೀಮಠ, ರಮೇಶ ಹಳಿಮನಿ,



ಕಾಶೀನಾಥ ರಾಮಗೊಂಡ, ಕಾಸು ಕುಂಬಾರ, ಶಂಕ್ರೆಪ್ಪ ಹಡಪದ, ಮಡಿವಾಳಪ್ಪ ಹಡಪದ, ಭೀಮರಾಯ ಕುಂಬಾರ ಸೇರಿದಂತೆ ಇತರರು ಇದ್ದರು.

## ಅಂಬೇಡ್ಕರ್ ಮನುಸ್ಮೃತಿ ಆವರ್ಣಿಯ :ಹೇಮಗಿರಿಮಠ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಸಂವಿಧಾನ ಶಿಲ್ಪಿ, ವಿಶ್ವಜ್ಞಾನಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಮನುಸ್ಮೃತಿ ಆವಣಿ9ಯುವಾಗಿದೆ ಎಂದು ಆಲಮಟ್ಟಿ ಮಂಜಪ್ಪ ಹರ್ಡೇಕರ ಸ್ಮಾರಕ ಸಂಯುಕ್ತ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಪಿ.ಎ.ಹೇಮಗಿರಿಮಠ ಹೇಳಿದರು.

ಭಾನುವಾರ ಸ್ಥಳೀಯ ಎಂ.ಎಚ್.ಎಂ.ಪಪೂ ಕಾಲೇಜು ಆವರಣದಲ್ಲಿ ಮಹಾಮಾನವತಾವಾದಿ ಡಾ.ಬಿ.ಆರ್.ಅಂಬೇಡ್ಕರ್ ರವರ 133 ನೇ ಜಯಂತಿ ಕಾರ್ಯಕ್ರಮದ ನಿಮಿತ್ಯ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಶ್ರದ್ಧೆಯಿಂದ ಪಡೆದ ಶಿಕ್ಷಣವೇ ಅಂಬೇಡ್ಕರ್ ಅವರನ್ನು ಜಗದಲ್ಲಿ ಮಿನುಗುವಂತೆ ಮಾಡಿದೆ.ದೇಶದ ಅಪ್ರತಿಮ ಅಂಬೇಡ್ಕರ್ ಎಂಬ ಸರಳತೆಯ ಪ್ರತಿಭೆಗೆ ಇಡೀ ವಿಶ್ವವೇ ಇಂದು ಗೌರವನಮನ ಸಲ್ಲಿಸಿ ಧನ್ಯತೆಭಾವ ಮೆರೆಯುತ್ತಿದೆ. ಅಂಬೇಡ್ಕರ್ ಅವರಲ್ಲಿ ಜ್ಞಾನ



ಭಂಡಾರದ ಅಗಾಧತೆ ಎಂಥದಿತ್ತು ಎಂಬುದನ್ನು ನಾವು ಅರಿಯಬಹುದು. ದೇಶದ ಜನತೆಯ ನೆಮ್ಮದಿಯ ಬದುಕಿಗೆ ಪವಿತ್ರ,ಅದ್ಭುತ ಸಂವಿಧಾನ ಅವರು ನೀಡಿದ್ದಾರೆ. ಸಂವಿಧಾನದ ಅಡಿಯಲ್ಲಿ ನಾವುಗಳು ಜೀವನಪಥ ಸಾಗಿಸಿದರೆ ಯಶಸ್ಸು ಕಾಣಬಹುದು ಎಂದರು.

ಬಾಬಾಸಾಹೇಬರ ದೂರ ದೃಷ್ಟಿಯ ಚಿಂತನೆ, ವಿಶಾಲ ಮನಸ್ಥಿತಿಯ ಅಧ್ಯಯನ, ಮಾನವೀಯ ಮೌಲ್ಯಗಳ ಸಾಮಾಜಿಕ ಕಳಕಳಿ ದೈತ್ಯ ರೂಪದ ಪರಿಮಳಗಳಾಗಿವೆ. ಜಿಡ್ಡಗಟ್ಟಿ ಬೇರು ಬಿಟ್ಟಿದ ಸಾಮಾಜಿಕ ಅಸ್ಪೃಶ್ಯತೆ ತೊಲಗಿಸಲು ಚಿಂತನಾರ್ಹ ಸ್ಮರಣ ಶಕ್ತಿಯೊಂದಿಗೆ ಅವರು ಶ್ರಮಿಸಿದ್ದಾರೆ. ಅವರ ವ್ಯಕ್ತಿತ್ವ, ಸಾಧನೆ ಅನುಪಮವಾಗಿದೆ ಎಂದರು.

ಅಂಬೇಡ್ಕರ್ ಅವರ ಬದುಕು ಶ್ರೇಷ್ಠತೆಯ ಶ್ರೇಣಿಯಲ್ಲಿ ನಡೆದಿವೆ. ಸಮಾನತೆ, ಭ್ರಾತೃತ್ವದ ಪರಿಕಲ್ಪನೆಯಿಂದ ವ್ಯಕ್ತಿಗೌರವಕ್ಕೆ ಪಾತ್ರರಾಗಿರುವ ಅಂಬೇಡ್ಕರ್ ಅವರ ವಿಚಾರಧಾರೆಗಳು ಸದಾಕಾಲವೂ ಪ್ರಸ್ತುತವಾಗಿವೆ. ಮಹಾನ್ ನಾಯಕನ ತತ್ವಾದರ್ಶಗಳು ಸ್ಪೂರ್ತಿಯ ಸೆಲೆಯಾಗಿದೆ.ಸಂವಿಧಾನವೇ ಭಾರತದ ಸಂಜೀವಿನಿ ಅಗಿದೆ ಎಂದು ಪ್ರಾಚಾರ್ಯ ಪಿ.ಎ.ಹೇಮಗಿರಿಮಠ ಅಭಿಪ್ರಾಯಿಸಿದರು.

ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಹೂವಮಾಲೆ ಹಾಕಿ ಪೂಜಿಸಿ ಗೌರವಿಸಲಾಯಿತು. ಗಂಗಾಧರ ಹಿರೇಮಠ, ಈರಣ್ಣ ಕುಮಟಗಿ, ಶಾಂತೂ,ತಡಸಿ, ತಿಮ್ಮಣ್ಣ ದಾಸರ, ಗೋಪಾಲ ಬಸಪ್ಪ ವಡ್ಡರ ಇತರರಿದ್ದರು.

## ಬಡ ವಿದ್ಯಾರ್ಥಿಗಳಿಗೆ ಕಾಲೇಜಿನ ಶುಲ್ಕದಲ್ಲಿ ವಿನಾಯತಿ :ಮದರಿ

**ಉದಯರಶ್ಮಿ ನ್ಯೂಸ್**




ಮುದ್ದೇಬಿಹಾಳ: ಪ್ರತೀ ವರ್ಷದಂತೆ ಈ ವರ್ಷವೂ ಬಿಪಿಎಲ್ ಪಡಿತರ ಚೀಟಿ ಹೊಂದಿರುವ ವಿದ್ಯಾರ್ಥಿಗಳಿಗೆ ಕಾಲೇಜಿನ ಒಟ್ಟು ಶುಲ್ಕದಲ್ಲಿ ವಿನಾಯತಿ ನೀಡುತ್ತಿದ್ದೇವೆ ಎಂದು ಅಹಿಲ್ಯಾದೇವಿ ಹೋಳ್ಕರ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಂ.ಎನ್.ಮದರಿ ಹೇಳಿದರು.

ಪಟ್ಟಣದ ವಿದ್ಯಾನಗರ ಬಡಾವಣೆಯಲ್ಲಿರುವ ಅಭ್ಯುದಯ ಕಾಲೇಜು ಆವರಣದಲ್ಲಿ ನಡೆದ ಬ್ರಿಲಿಯಂಟ್ ಟ್ಯಾಲೆಂಟ್ ಅವಾರ್ಡ ಪರೀಕ್ಷೆ-2024 ರ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಬಾರದು ಎನ್ನುವ ಸದುದ್ದೇಶದಿಂದ ಕಳೆದ ಹಲವು ವರ್ಷಗಳಿಂದ ನಮ್ಮ ಸಂಸ್ಥೆ ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ನೀಡುತ್ತ ಬಂದಿದೆ. ಒಳ್ಳೆಯ ವಾತಾವರಣ, ಗುಣಮಟ್ಟದ ಕಟ್ಟಡ ಹೊಂದಿರುವ ಕಾಲೇಜಿನಲ್ಲಿ ನುರಿತ ಪ್ರಾಧ್ಯಾಪಕರಿಂದ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದೇವೆ. ಅವಾರ್ಡ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ಮೊದಲ 10 ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸಹಿತ ಕಾಲೇಜು ಫೀ ಉಚಿತ, ನಂತರದ 5 ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕದಲ್ಲಿ ಶೇ.50 ರಿಯಾಯತಿ, ಮುಂದಿನ 10 ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕದಲ್ಲಿ ಶೇ20 ರಿಯಾಯತಿ ಮತ್ತು ಪರೀಕ್ಷೆಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳಿಗೆ ಶೇ10 ರಿಯಾಯತಿ ನೀಡಿ ಪ್ರೋತ್ಸಾಹಿಸುತ್ತಿದ್ದೇವೆ ಎಂದರು.

ಸಮಾರಂಭದಲ್ಲಿ ಹಿಂದಿನ ವರ್ಷ ಹೆಚ್ಚು ಅಂಕ ಪಡೆದು ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಸಂಸ್ಥೆಯ ಕಿರಣ ಮದರಿ, ಪ್ರಶಾಂತ ಬಿರಾದಾರ, ಮುನೀರ ನಾಯಕ, ಎ.ಎಫ್.ಭುವಾಜಿ, ಕೆ.ಬಿ.ರೂಡಗಿ, ಸುರಜ ತಳವಾರ, ರಂಗಸ್ವಾಮಿ ಎಸ್, ಅವಿನಾಶ ತಾಳಿಕೋಟೆ, ಎನ್.ಟಿ.ಗೌಡರ, ರವಿ ಚಾಂದವಾಡಿ, ಎಂ.ಚಂದ್ರಶೇಖರ, ಪಿ.ನರೇಶ, ನಿವೇದಿತಾ ದೇಶಪಾಂಡೆ, ಎಚ್.ಎಸ್. ಗೌಡರ ಸೇರಿದಂತೆ ಮತ್ತೀತರರು ಇದ್ದರು.

ಪ್ರಾಂಶುಪಾಲ ಬಿ.ಜಿ.ಬಿರಾದಾರ ಕಾರ್ಯಕ್ರಮ ನಿರ್ವಹಿಸಿದರು.

ಅವಾರ್ಡ ಪರೀಕ್ಷೆಯಲ್ಲಿ ಭೂಮಿಕಾ ಜುಮ್ನಾಳ ಪ್ರಥಮ, ಮುತ್ತು ಮಸರಕಲ್ಲ ದ್ವಿತೀಯ, ಮಲ್ಲಿಕಾರ್ಜುನ ಹಾವರಗಿ ತೃತೀಯ ಸ್ಥಾನ ಪಡೆಯುವ ಮೂಲಕ ಕಾಲೇಜು ಮತ್ತು ಹಾಸ್ಟೇಲ್ ಶುಲ್ಕದಿಂದ ಸಂಪೂರ್ಣ ವಿನಾಯತಿ ಪಡೆದರು.

## ಡಾ. ಅಂಬೇಡ್ಕರ ಒಂದು ಜಾತಿಗೆ ಸೀಮಿತರಲ್ಲ :ಮುತ್ತಗಿ

**ಉದಯರಶ್ಮಿ ನ್ಯೂಸ್**



ತಾಳಿಕೋಟಿ: ಮಹಾಮಾನವತವಾದಿ, ಸಮಾನತೆಯ ಹರಿಕಾರ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ ಅವರು ಎಲ್ಲ ಜಾತಿ ಜನಾಂಗದವರ ಏಳಿಗೆಯನ್ನು ಬಯಸಿದರು. ಅವರು ರಚಿಸಿದ ಸಂವಿಧಾನದಲ್ಲಿ ಎಲ್ಲ ಜನರಿಗೂ ಸಮಾನ ಅವಕಾಶಗಳಿವೆ. ಇಂತಹ ಮಹಾನ್ ವ್ಯಕ್ತಿಯನ್ನು ಒಂದು ಜಾತಿಗೆ ಸೀಮಿತಗೊಳಿಸುವ ಕೆಲಸ ಮಾಡಬಾರದು ಎಂದು ದಲಿತ ಮುಖಂಡ ಜೈ ಭೀಮ ಮುತ್ತಗಿ ಹೇಳಿದರು.

ಭಾನುವಾರ ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಡಾ. ಬಾಬಾ ಸಾಹೇಬ ಅಂಬೇಡ್ಕರ ಅವರ 133 ನೇ ಜಯಂತಿ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ. ಅಂಬೇಡ್ಕರ್ ಅವರು ತಮ್ಮ ಜೀವನ ದುದ್ದಕ್ಕೂ ಅವಮಾನ ಮತ್ತು ನೋವನ್ನು ಅನುಭವಿಸಿದರು ಆದರೂ ತಮ್ಮ ಜೀವನದ ಗುರಿಯನ್ನು ತಲುಪಲು ಅವರು ನಿರಂತರವಾಗಿ ಪ್ರಯತ್ನಿಸಿ ಯಶಸ್ವಿಯಾದರು. ಅವರು ನಮಗೆ ವಿಶ್ವವಿಖ್ಯಾತವಾದ ಸಂವಿಧಾನವನ್ನು ಕೊಟ್ಟು ಹೋಗಿದ್ದಾರೆ ಇಂಥ ಶ್ರೇಷ್ಠ ಗ್ರಂಥವನ್ನು ಬದಲಿಸುವ ಮಾತುಗಳನ್ನು ಕೆಲವರು ಹೇಳುತ್ತಿದ್ದಾರೆ. ಇದು ಎಂದಿಗೂ ಸಾಧ್ಯವಾಗುವುದಿಲ್ಲ ಎಂಬುದು ಅವರು ತಿಳಿಯಬೇಕಾಗಿದೆ ಎಂದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ತಹಸಿಲ್ದಾರ ಕೀರ್ತಿ ಚಾಲಕ್ ಅವರು ಶ್ರೇಷ್ಠ ದಾರ್ಶನಿಕರಾದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಒಂದು ಶ್ರೇಷ್ಠವಾದ ಸಂವಿಧಾನವನ್ನು ನಮಗೆ ಕೊಟ್ಟು ಹೋಗಿದ್ದಾರೆ ಅದರಲ್ಲಿ ದೇಶದ ಪ್ರತಿಯೊಬ್ಬ ನಾಗರಿಕನ ಹಕ್ಕು ಹಾಗೂ ಕರ್ತವ್ಯಗಳನ್ನು ತಿಳಿಸಲಾಗಿದೆ. ಡಾ. ಬಿ .ಆರ್. ಅಂಬೇಡ್ಕರ್ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಮುನ್ನೆಡೆಯಬೇಕಾಗಿದೆ ಎಂದರು.

ಕಾರ್ಯಕ್ರಮದ ಮುನ್ನ ಡಾ. ಬಿ ಆರ್ ಅಂಬೇಡ್ಕರ್ ವೃತ್ತದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ತಾಲೂಕು ಆಡಳಿತ ಹಾಗೂ ಅಂಬೇಡ್ಕರ ಸಮಾಜದ ವತಿಯಿಂದ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.

ಈ ಸಮಯದಲ್ಲಿ ಪುರಸಭೆ ಮುಖ್ಯಾಧಿಕಾರಿ ಮೋಹನ ಜಾಧವ, ತಾಲೂಕ ಪಂಚಾಯತ.ಇ ಓ ಬಸವಂತ್ರಾಯಗೌಡ, ಆರ್.ಬಿರಾದಾರ. ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ. ಕಟ್ಟಿಮನಿ, ಪಿಎಸ್ ಆಯ್ ಎಂ. ಡಿ. ಘೋರಿ, ದಲಿತ ಮುಖಂಡರಾದ ಮುತ್ತಪ್ಪ ಚಮಲಾಪೂರ, ಪುರಸಭೆ ಸದಸ್ಯೆ ಅಕ್ಕಮಹಾದೇವಿ ಕಟ್ಟಿಮನಿ, ಬಸವರಾಜ ಕಟ್ಟಿಮನಿ, ಕಸಾಪ ಅಧ್ಯಕ್ಷ ಆರ್. ಎಲ್ ಕೊಪ್ಪದ, ದೇವು ಹಾದಿಮನಿ, ಕಾರ್ತಿಕ್ ಕಟ್ಟಿಮನಿ, ನಾಗೇಶ್ ಕಟ್ಟಿಮನಿ, ಮಹೇಶ ಚಲವಾದಿ, ಮುರಿಗೆಪ್ಪ ಸರಶೆಟ್ಟಿ, ಅಲ್ಲಾಬಕ್ಷ ನವಾಜಕಟ್ಟಿ, ಮಾಸೂಮಸಾಬ ಕೆಂಭಾವಿ, ಮಂಜುನಾಥ ಶೆಟ್ಟಿ, ಇಬ್ರಾಹೀಂ ಮನ್ನೂರ, ಗಂಗಾಧರ ಕಸ್ತೂರಿ, ಸಿ ಆರ್ ಸಿ ರಾಜುಸಿಂಗ್ ವಿಜಾಪೂರ, ಇಬ್ರಾಹಿಂ ಅಲಮೇಲ, ಗೋಪಾಲ ಕಟ್ಟಿಮನಿ, ಅಬೂಬಕರ ಲಾಹೋರಿ, ನಬಿ ಲಾಹೋರಿ, ಜಗದಿಶ, ಆರ್. ಜೈನಾಪೂರ, ಸಮಾಜ ಕಲ್ಯಾಣ ಇಲಾಖೆಯ ಎಸ್. ಎಂ. ಕಲಬುರಗಿ, ಕೋರಿ, ಪುರಸಭೆ ಹಾಗೂ ಕಂದಾಯ ಇಲಾಖೆಯ ಸಿಬ್ಬಂದಿ ವರ್ಗದವರು ಇದ್ದರು.

## ಉರ್ದು ಪ್ರೌಢಶಾಲೆಯಲ್ಲಿ ಅಂಬೇಡ್ಕರ ಜಯಂತಿ




**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ನಾಲತವಾಡ ರಸ್ತೆಯಲ್ಲಿರುವ ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ, ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 133 ನೇ ಜನ್ಮದಿನಾಚರಣೆಯನ್ನು ಆಚರಿಸಲಾಯಿತು.

ಈ ವೇಳೆ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಎಲ್. ಎಂ.ನಾಯ್ಕೋಡಿ, ಮುಖ್ಯಗುರು ಎಸ್.ವಿ.ಹಿರೇಮಠ, ದೈಹಿಕ ಶಿಕ್ಷಕ ಎ.ಸಿ.ಕೆರೂರ, ಶಿಕ್ಷಕರುಗಳಾದ ಕೆ.ಎಸ್.ಚೆಟ್ಟಿ, ತಬಸ್ಸುಮ ಖಾಜಿ, ಸಂತೋಷ್ ಬಿದರಿ, ಮಹಾನಂದ ಹತ್ತರಕಿಹಾಳ ಉಪಸ್ಥಿತರಿದ್ದರು.

## ಯಾವುದೇ ಪಂಥಗಳಿಗೆ ಸೀಮಿತರಾಗದ ಡಾ.ಅಂಬೇಡ್ಕರ್

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಭಾರತರತ್ನ ಡಾ.ಅಂಬೇಡ್ಕರ್ ಯಾವುದೇ ಜಾತಿ, ಧರ್ಮ, ಮತ, ಪಂಥಗಳಿಗೆ ಸೀಮಿತವಾಗದೇ ಮಹಾಮಾನವತಾವಾದಿಯಾಗಿ ವಿಶ್ವಮಾನವರೆನಿಸಿದ್ದಾರೆ ಎಂದು ತಹಶೀಲ್ದಾರ ಪ್ರಕಾಶ ಸಿಂದಗಿ ಹೇಳಿದರು.

ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ತಾಲ್ಲೂಕು ಆಡಳಿತದಿಂದ ಶುಕ್ರವಾರ ಜರುಗಿದ ಡಾ. ಅಂಬೇಡ್ಕರವರ 133 ನೇ ಜಯಂತಿಯಲ್ಲಿ ಪಾಲ್ಗೊಂಡು, ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರ ಮೂಲಕ ಮಾತನಾಡಿದರು. ಅಂಬೇಡ್ಕರ್ ಅವರ ಸಮಗ್ರ ಜೀವನವೇ ಆದರ್ಶ. ಭಾರತೀಯ ಸಂವಿಧಾನದ ಪಿತಾಮಹರಾದ ಇವರು ಮಾನವೀಯ ಮೌಲ್ಯಗಳು, ಶಿಕ್ಷಣ ಹಾಗೂ ಸಮಾನತೆಯ ಪ್ರತಿಪಾದನೆಯ ಪ್ರಮುಖ ಹರಿಕಾರರೆನಿಸಿದ್ದಾರೆ ಎಂದರು.

ತಾಲ್ಲೂಕು ಪಂಚಾಯಿತಿ ಇಓ ಸಂಜೀವ ಜುನ್ನೂರ ಮಾತನಾಡಿ, ಪ್ರತಿಜ್ಞಾ ವಿಧಿ ಬೋಧಿಸಿದರು. ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಪ್ರಭುಗೌಡ ಬಿರಾದಾರ(ಅಸ್ಕಿ), ಬಿಜೆಪಿ ಧುರೀಣ ಸಿದ್ದು ಬುಳ್ಳಾ, ದಲಿತ ಸಮಾಜ ಸುಧಾರಣಾ ಸಮೀತಿ ಅಧ್ಯಕ್ಷ ಕಾಶೀನಾಥ ತಳಕೇರಿ ಹಾಗೂ ಪ್ರಕಾಶ ಗುಡಿಮನಿ ಮಾತನಾಡಿದರು.

ಪಿಎಸ್ಐಗಳಾದ ಬಸವರಾಜ ತಿಪ್ಪಾರಡ್ಡಿ, ಬಿ.ಬಿ.ಕೊಳ್ಳಿ, ಶಿರಸ್ತೇದಾರ ಸುರೇಶ ಮ್ಯಾಗೇರಿ, ಪಟ್ಟಣ ಪಂಚಾಯಿತಿ ಮಾಜಿಅಧ್ಯಕ್ಷ ಭಾಸ್ಕರ್ ಗುಡಿಮನಿ, ಸದಸ್ಯ ಉಮೇಶ ರೂಗಿ, ಕಿರಿಯ ಆರೋಗ್ಯ ನಿರೀಕ್ಷಕ ಫಿರೋಜ್ ಮುಲ್ಲಾ, ನಿಂಗು ಯಂಭತ್ನಾಳ, ಮುನ್ನಾ ಮಳಖೇಡ, ಸಮುದಾಯದ ಪ್ರಮುಖರಾದ ಭೀಮಪ್ಪ ಗುಡಿಮನಿ, ಮಲೆಪ್ಪ ಮಲ್ಲಾರಿ, ಬಸವರಾಜ ತಳಕೇರಿ, ರಮೇಶ ಮ್ಯಾಕೇರಿ, ಪ್ರಕಾಶ ಮಲ್ಲಾರಿ, ರಾಘವೇಂದ್ರ ಗುಡಿಮನಿ, ರಾವುತ ತಳಕೇರಿ, ಜಾನು ಗುಡಿಮನಿ, ಸೇರಿದಂತೆ ವಿವಿಧ ದಲಿತಪರ ಸಂಘಟನೆಗಳ ಪ್ರಮುಖರು, ಪದಾಧಿಕಾರಿಗಳು ಇದ್ದರು.

## ಜ್ಞಾನ ಭಾರತಿ ಶಾಲೆಯಲ್ಲಿ ಅಂಬೇಡ್ಕರ ಜಯಂತಿ



ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಪಟ್ಟಣದ ಜ್ಞಾನ ಭಾರತಿ ವಿದ್ಯಾ ಮಂದಿರ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ ಜಯಂತ್ಯುತ್ಸವವನ್ನು ಆಚರಿಸಲಾಯಿತು.

ಈ ವೇಳೆ ಪ್ರಾಚಾರ್ಯ ಎ.ಕೆ.ಹುನಗುಂದ, ಪ್ರೌಢ ಶಾಲಾ ಮುಖ್ಯಗುರು ರಾಮಚಂದ್ರ ಹೆಗಡೆ, ಆಂಗ್ಲ ಮಾಧ್ಯಮ ಮುಖ್ಯಗುರುಮಾತೆ ರಂಜಿತಾ ಭಟ್ಟ, ಶಿಕ್ಷಕರುಗಳಾದ ಗುರುಬಾಯಿ ತಂಗಡಗಿ, ವಿ.ವಿ.ಪಾಟೀಲ್, ಮಂಜುನಾಥ ಪಡದಾಳಿ, ಗುಂಡಣ್ಣ ಬಡಿಗೇರ, ಆರ್.ಕೆ.ಕುಲಕರ್ಣಿ, ಪಾಲಕರಾದ ಮಲ್ಲಿಕಾರ್ಜುನ ಕುಂಬಾರ ಸೇ-ರಿದಂತೆ ಮತ್ತೀತರರು ಇದ್ದರು.

## ಮತದಾನ ಜಾಗೃತಿಗೆ ಸಹಿ ಸಂಗ್ರಹಣ ಅಭಿಯಾನ



ಉದಯರಶ್ಮಿ ನ್ಯೂಸ್

ಚಡಚಣ: ಜಿಲ್ಲಾ ಆಡಳಿತ ವಿಜಯಪುರ, ಸ್ವೀಪ್ ಸಮಿತಿ ಹಾಗೂ ಪಟ್ಟಣ ಪಂಚಾಯತಿ ಚಡಚಣ ಇವರ ಸಹಯೋಗದಲ್ಲಿ ಮತದಾರರಿಗೆ ಮತದಾನದ ಕು-ರಿತು ಜಾಗೃತಿ ಮೂಡಿಸಲು ಸಹಿ ಸಂಗ್ರಹಣ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಸಹಿ ಸಂಗ್ರಹಣ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಎಸ್. ಎಸ್. ಪೂಜಾರಿ ಅವರು 18 ವರ್ಷ ತುಂಬಿದ ಪ್ರತಿಯೊಬ್ಬ ಸ್ತ್ರೀ-ಪುರುಷರು ಮತದಾನ ಮಾಡಲು ಅರ್ಹರಾಗಿದ್ದಾರೆ. ಆದ ಕಾರಣ ಎಲ್ಲ ಮತದಾರ ಬಾಂಧವರು ಬರುವ 2024 ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.

ಇದೇ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿಯ ಕಂದಾಯ ನಿರೀಕ್ಷಕರಾದ ಆರ್.ಬಿ.ಭಂಡಾರಿ, ಶ್ರೀದೇವಿ ಕೊಟ್ಟಲಗಿ, ಅನುಸೂಯಾ ಕಂಟಿಕರ, ರಾಜೇಂದ್ರ ಸುಂಗದಿ, ಮತ್ತು ಪಟ್ಟಣ ಪಂಚಾಯಿತಿಯ ಸಿಬ್ಬಂದಿ ಮತ್ತು ಪೌರಕಾರ್ಮಿಕರು ಇದೇ ಸಂದರ್ಭದಲ್ಲಿ ಇದ್ದರು.

## ಪತ್ರಿಕಾ ಭವನದಲ್ಲಿ ಅಂಬೇಡ್ಕರ್ ಜಯಂತಿ




ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಹೊಸ ಪತ್ರಿಕಾ ಭವನದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತ್ಯುತ್ಸವವನ್ನು ಭಾನುವಾರ ಸಂಭ್ರಮದಿಂದ ಆಚರಿಸಲಾಯಿತು.

ಡಾ. ಅಂಬೇಡ್ಕರ್ ಜಯಂತಿ ಅಂಗವಾಗಿ ಡಾ. ಬಾಬಾಸಾಹೇಬರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಲಾಯಿತು.

ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ, ಉಪಾಧ್ಯಕ್ಷ ಪ್ರಕಾಶ ಬೆಣ್ಣೂರ, ರಾಜ್ಯ ಸಮಿತಿ ಸದಸ್ಯ ಡಿ.ಬಿ. ವಡವಡಗಿ, ಖಜಾಂಚಿ ರಾಹುಲ್ ಆಪ್ಟೆ, ಕಾರ್ಯಕಾರಿಣಿ ಸದಸ್ಯ ಬಸವರಾಜ ಉಳ್ಳಾಗಡ್ಡಿ, ಸಲಹಾ ಮಂಡಳಿಯ ಇರ್ಫಾನ್ ಶೇಖ್ ಮತ್ತಿತರರಿದ್ದರು.

## ಮತದಾನ ಮಾಡಿ ಪ್ರಜಾಪ್ರಭುತ್ವ ವ್ಯವಸ್ಥೆ ಗಟ್ಟಿಗೊಳಿಸಿ :ಗದ್ಯಾಳ

ಉದಯರಶ್ಮಿ ನ್ಯೂಸ್



ಇಂಡಿ: ಮೇ.7ರಂದು ನಡೆಯುವ ಸಾರ್ವತ್ರಿಕ ಚುನಾವಣೆಯಲ್ಲಿ ಅರ್ಹ ಮತದಾರರು ಕಡ್ಡಾಯವಾಗಿ ಮತ ಹಾಕುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಹೇಳಿದರು.

ಅವರು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್, ಕೆಜಿಎಸ್, ಯುಬಿಎಸ್ ಶಾಲೆಯಲ್ಲಿ ಜಿಲ್ಲಾ ಮತ್ತು ತಾಲೂಕು ಸ್ವೀಪ್ ಸಮಿತಿ, ಗ್ರಾಮ ಪಂಚಾಯಿತಿ ಹಿರೇರೂಗಿ ವತಿಯಿಂದ 'ರಂಗೋಲಿ ಬಿಡಿಸುವ ಮೂಲಕ ಪ್ರಜಾಪ್ರಭುತ್ವದಲ್ಲಿ ಮತದಾನವೇ ಹಬ್ಬ' ಎಂಬ ಶೀರ್ಷಿಕೆಯಡಿ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚುನಾವಣಾ ಪ್ರಕ್ರಿಯೆ ಪ್ರಜಾಪ್ರಭುತ್ವದ ಸೌಂದರ್ಯ ಹೆಚ್ಚಿಸುತ್ತದೆ. ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ನಾವು ಸರಿಯಾದ ರೀತಿಯಲ್ಲಿ ಉಪಯೋಗಿಸಿ ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡುವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ತಾಲೂಕ ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ನೀಲಗಂಗಾ ಮಾತನಾಡಿ, ಚುನಾವಣೆ ಎಂಬ ಸಾಂವಿಧಾನಿಕ ವ್ಯವಸ್ಥೆಯಲ್ಲಿ ಮತದಾರ ಭಾಂದವರೇ ಪ್ರಭುಗಳು. ರಾಜ್ಯದ, ರಾಷ್ಟ್ರದ ಭವಿಷ್ಯ ನಿರ್ಮಾಣದಲ್ಲಿ ಮತದಾನ ಪಾತ್ರ ಬಹುಮುಖ್ಯ. ಜವಾಬ್ದಾರಿಯುತವಾಗಿ ಮತ ಚಲಾಯಿಸುವುದು ಪ್ರತಿಯೊಬ್ಬ ಮತದಾರನ ಕರ್ತವ್ಯ ಎಂದು ಹೇಳಿದರು.

ಹಿರೇರೂಗಿ ಪಿಡಿಓ ಬಸವರಾಜ ಬಬಲಾದ ಮಾತನಾಡಿ, ಪ್ರತಿಯೊಬ್ಬರು ತಮ್ಮ ಸುತ್ತಮುತ್ತಲಿನವರಿಗೆ ಮತದಾನದ ಮಹತ್ವವನ್ನು ತಿಳಿಸಿ, ಮತದಾನ ಮಾಡುವಂತೆ ಅವರಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಅಂತರಾಷ್ಟ್ರೀಯ ಮಟ್ಟದ ಚಿನ್ನದ ಪದಕ ವಿಜೇತ ಕ್ರೀಡಾಪಟು ಮತ್ತು ಮತದಾನ ಜಾಗೃತಿಯ ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ರಾಜೇಶ ಪವಾರ ಮಾತನಾಡಿ,

ಮತದಾನವು ದೇಶದ ಪ್ರತಿಯೊಬ್ಬ ನಾಗರಿಕರ ಕರ್ತವ್ಯ ಹಾಗೂ ಮೂಲ ಹಕ್ಕಾಗಿದ್ದು, ಪ್ರತಿಯೊಬ್ಬರು ಮತದಾನ ಮಾಡಲು ಮುಂದಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಮಫಲಕಗಳನ್ನು ಹಿಡಿದು

ಘೋಷಣೆ ಕೂಗುತ್ತಾ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜಾಥಾ ನಡೆಸಿ ಜಾಗೃತಿ ಮೂಡಿಸಲಾಯಿತು.

ಶಾಲೆಯಲ್ಲಿ ಮತದಾನ ಜಾಗೃತಿಯ ರಂಗೋಲಿ ಬಿಡಿಸಿದ್ದು ವಿಶೇಷವಾಗಿ-ತ್ತು. ಶಾಲಾ ಮಕ್ಕಳು ತಮ್ಮ ಪಾಲಕರಿಗೆ ಪತ್ರ ಬರೆದು ಮತದಾನದ ಜಾಗೃತಿ ಮೂಡಿಸಿದರು. ಶಾಲೆ ಹಾಗೂ ಪಂಚಾಯಿತಿ ಆವರಣದಲ್ಲಿರುವ ಗಿಡಗಳಲ್ಲಿ ಪಕ್ಷಿಗಳಿಗೆ ನೀರನ್ನು ಒದಗಿಸಲು ಮಣ್ಣಿನ ತಟ್ಟೆಗಳನ್ನು ಹಾಕಲಾಯಿತು.

ತಾ.ಪಂ ಸಹಾಯಕ ನಿರ್ದೇಶಕ ಸಂಜಯ ಖಡಗೇಕರ, ಶಾಲಾ ಮುಖ್ಯ ಶಿಕ್ಷಕರಾದ ಅನಿಲ ಪತಂಗಿ, ವ್ಹಿ ವೈ ಪತ್ತಾರ, ಎ ಎಂ ಬೆದ್ರೇಕರ, ಯುವಕರಾದ ಪರಶುರಾಮ ಹೊಸಮನಿ, ಸಂತೋಷ ಕೋಟಗೊಂಡ ಹಾಗೂ ಶಿಕ್ಷಕ ಸಿಬ್ಬಂದಿ, ಗ್ರಾಮ ಪಂಚಾಯಿತಿ ಸರ್ವ ಸದಸ್ಯರು, ಸಿಬ್ಬಂದಿ ವರ್ಗ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಗ್ರಾಮಸ್ತರು, ಮಕ್ಕಳು ಪಾಲ್ಗೊಂಡಿದ್ದರು. ಶಿಕ್ಷಕ ಎಸ್ ಆರ್ ಚಾಳೇಕರ ಮತದಾನ ಜಾಗೃತಿಯ ಪ್ರತಿಜ್ಞಾ ವಿಧಿ ಬೋಧಿಸಿದರು.

## ಸಂವಿಧಾನ ನೀಡಿರುವ ಹಕ್ಕು ಸರಿಯಾಗಿ ಪಾಲಿಸೋಣ :ಜುನ್ನೂರ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಮತದಾನ ಎಂಬುದು ಸಂವಿಧಾನ ನಮಗೆ ನೀಡಿರುವ ಹಕ್ಕು ಇದನ್ನು ಸರಿಯಾಗಿ ಪಾಲಿಸೋಣ ಎಂದು ತಾಲ್ಲೂಕು ಪಂಚಾಯಿತಿ ಇಓ ಸಂಜೀವ ಜುನ್ನೂರ ಹೇಳಿದರು.

ತಾಲ್ಲೂಕಿನ ಸಾತಿಹಾಳ ಗ್ರಾಮ ಪಂಚಾಯಿತಿ ನರೇಗಾ ಯೋಜನೆಯಡಿ ಕಾಲುವೆ ಹೂಳೆತ್ತುವ ಕಾರ್ಯ ನಿರ್ವಹಿಸುತ್ತಿರುವ ಕೂಲಿ ಕಾರ್ಮಿಕರಿಗೆ ಭಾನುವಾರ ತಾಲ್ಲೂಕು ಸ್ವೀಪ್ ಸಮೀತಿ ಹಾಗೂ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮದ ಮೂಲಕ ಚುನಾವಣಾ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದರು. ಪ್ರಜಾಪ್ರಭುತ್ವದ ಏಳಿಗೆಗಾಗಿ ಉತ್ತಮ ಪ್ರತಿನಿಧಿಯನ್ನು ಆಯ್ಕೆ ಮಾಡಿಕೊಳ್ಳುವುದಕೋಸ್ಕರ ನಾವೆಲ್ಲರೂ ನಮ್ಮ ಕೆಲಸಗಳನ್ನು ಬದಿಗಿಟ್ಟು ಮೇ 7 ರಂದು ತಪ್ಪದೇ ಮತದಾನ ಮಾಡೋಣ ಎಂದರು.

ಗ್ರಾಮ ಪಂಚಾಯಿತಿ ಪಿಡಿಓ ಎಮ್.ಎನ್.ಕತ್ತಿ ಮಾತನಾಡಿ, ದೇಶದ ಪ್ರತಿಯೊಬ್ಬ ಪ್ರಜೆ ಮತದಾನ ಮಾಡುವುದರ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆ ಗಟ್ಟಿಗೊಳಿಸಬೇಕು ಎಂದರು.

ಈ ಸಂದರ್ಭದಲ್ಲಿ 45 ಮಹಿಳೆಯರು 8 ಜನ ಪುರುಷರು ಸಹಿತ ಒಟ್ಟು 53 ಜನ ಕೂಲಿಕಾರ್ಮಿಕರು ಹಾಜರಿದ್ದರು.

ತಾಂತ್ರಿಕ ಸಂಯೋಜಕ ಶರಣಗೌಡ ಪಾಟೀಲ, ಐಇಸಿ ಸಂಯೋಜಕ ಸಿದ್ದು ಕಾಂಬ್ಳೆ, ಅಭಿಯಂತರ ಅರ್ಷದ್ ಕೋಟ್ನಾಳ, ಜಿ.ಎಸ್. ರೋಡಗಿ, ತಾಂಡಾ ರೋಜಗಾರಮಿತ್ರ ವಿನೋದ ರಾಠೋಡ, ಹಣಮಂತ್ರಾಯ ಬಿರಾದಾರ, ಶಿವಾನಂದ ಬಿರಾದಾರ, ಮಹಾದೇವ ಡೋಮನಾಳ ಇದ್ದರು.

## ಮಹಿಳೆ ಕಾಣೆ: ಪ್ರಕರಣ ದಾಖಲು

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ತಾಲೂಕಿನ ಹಿರೇಮುರಾಳ ಗ್ರಾಮದ ನಿವಾಸಿ ವಿಜಯಲಕ್ಷ್ಮೀ ವಡ್ಡರ ಮತ್ತು ಈಕೆಯ 3 ವರ್ಷದ ಪುತ್ರ ಉಮೇಶ ವಡ್ಡರ ಕಾಣೆಯಾಗಿರುವದಾಗಿ ಮುದ್ದೇಬಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೂಲತಃ ರಾಯಚೂರು ಜಿಲ್ಲೆಯ ಲಿಂಗಸೂರು ತಾಲೂಕಿನ ನಾವಲಗಿ ಗ್ರಾಮದ ಈ ಕುಟುಂಬ ಕೆಲ ವರ್ಷಗಳ ಹಿಂದೆ ಹಿರೇಮುರಾಳ ಗ್ರಾಮದಲ್ಲಿ ವಾಸವಾಗಿದ್ದರು. ಮಗುವನ್ನು ಕರೆದುಕೊಂಡು ಮಾ.31 ರಂದು ಮನೆಯಿಂದ ಕೂಲಿ ಕೆಲಸಕ್ಕೆ ಹೋಗಿ ಬರುವದಾಗಿ ತಿಳಿಸಿ ಹೋದವಳು ಮರಳಿ ಮನೆಗೆ ಬಂದಿರುವದಿಲ್ಲ ಎಂದು ವಿಜಯಲಕ್ಷ್ಮೀಯ ತಾಯಿ ಕಸ್ತೂರಿ ಫಿರ್ಯಾದಿಯಲ್ಲಿ ತಿಳಿಸಿದ್ದಾರೆ.

## ಪ್ರಜಾಪ್ರಭುತ್ವಕ್ಕೆ ಮೂರ್ತ ರೂಪ ನೀಡಿದ ಅಂಬೇಡ್ಕರ್

ಉದಯರಶ್ಮಿ ನ್ಯೂಸ್



ವಿಜಯಪುರ: ಸಾಮಾಜಿ-ಕ ಅಸಮಾನತೆಯ ವಿರುದ್ಧ ಹೋರಾಡಿದ, ಸಂವಿಧಾನದ ಮೂಲಕ ಪ್ರಜಾಪ್ರಭುತ್ವಕ್ಕೆ ಮೂರ್ತ ರೂಪ ನೀಡಿದ ಭಾರತ ರತ್ನ ಎಂದು ಬಂಜಾರಾ ಪ್ರೌಢ ಶಾಲೆಯ ಮುಖ್ಯ ಗುರುಗಳಾದ ಇ.ಡಿ.ಲವಾಣಿ ಅಭಿಪ್ರಾಯ ಪಟ್ಟರು.

ನಗರದ ಬಂಜಾರಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್‌ರವರ ಜಯಂತಿಯ ಅಂಗವಾಗಿ ಮಾತನಾಡಿದ ಅವರು. ಸಾಮಾಜಿಕ ಕಾರ್ಯಕ್ರಮಗಳನ್ನು ವೈಜ್ಞಾನಿಕ ಮನೋಭಾವನೆಯಿಂದ ನೋಡಿದಾಗ ಸಮಾಜಕ್ಕೆ ಅಂಟಿಕೊಂಡಿರುವ ಅಸ್ಪೃಶ್ಯತೆ, ಜಾತಿಪದ್ಧತಿ ಹಾಗೂ ತಾರತಮ್ಯ ಹೋಗಲಾಡಿಸಬಹುದು ಇದ್ದಕ್ಕೆ ಪ್ರತಿಯೊಬ್ಬರು ಮುಂದಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಎಂ.ಬಿ.ಪೂಜಾರಿಯವರು ಮಾತನಾಡುತ್ತ. ನಮ್ಮ ವಿದ್ಯಾಭ್ಯಾಸದ ಜೊತೆ ಜೊತೆಯಲ್ಲಿಯೇ ರಾಷ್ಟ್ರ ನಾಯಕರುಗಳ ಜೀವನ ಚರಿತ್ರೆಗಳನ್ನು ಓದುವುದನ್ನು ರೂಢಿಸಿಕೊಳ್ಳುವುದ-ರಿಂದ ರಾಷ್ಟ್ರಾಭಿಮಾನ, ರಾಷ್ಟ್ರ ಗೌರವ ಹೆಚ್ಚಾಗುತ್ತದೆ ಎಂದು ಹೇಳಿದರು.

ಅಂಬೇಡ್ಕರ್‌ರವರ ಭಾವಚಿತ್ರ ಪೂಜೆಯನ್ನು ಶಿಕ್ಷಕರುಗಳಾದ ಆರ್.ಎನ್.ಬಕಾಟೆ ಹಾಗೂ ಆರ್.ವಿ.ಭುಜಂಗನವರ ರವರುಗಳು ನೆರವೇರಿಸಿದರು. ಈ ವೇಳೆಯಲ್ಲಿ ಶಾಲೆಯ ಎಲ್ಲ ಶಿಕ್ಷಕ ಸಿಬ್ಬಂದಿ ವರ್ಗವು ಉಪಸ್ಥಿತರಿದ್ದರು.

## ಏ.16ರಂದು ಜಿಗಜಿಣಗಿ ನಾಮಪತ್ರ ಸಲ್ಲಿಕೆ : ಬೃಹತ್ ರ‍್ಯಾಲಿ

ಉದಯರಶ್ಮಿ ನ್ಯೂಸ್

ವಿಜಯಪುರ: ವಿಜಯಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಜೆಡಿ-ಎಸ್ ಮೈತ್ರಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರು ಏ.16 ಮಂಗಳವಾರದಂದು ಬೆಳಿಗ್ಗೆ 10 ಗಂಟೆಗೆ ನಗರದ ಬಿಜೆಪಿ ಚುನಾವಣಾ ಕಾರ್ಯಾಲಯದ ಬಳಿಯ ಮಧುಲಾ ಮಾರುತಿ ದೇವಸ್ಥಾನದಲ್ಲಿ ಪೂಜೆ ನೆರವೇರಿಸಿ ಅಲ್ಲಿಂದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದವರೆಗೂ ಕಾರ್ಯಕರ್ತರೊಂದಿಗೆ ಬೃಹತ್ ಶೋಭಾಯಾತ್ರೆ ಮೂಲಕ ತೆರಳಿ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಲಿದ್ದಾರೆ. ನಂತರ ಮಧ್ಯಾಹ್ನ 12 ಕ್ಕೆ ಸ್ಟೇಶನ್ ರಸ್ತೆಯ ದರ್ಬಾರ್ ಮೈದಾನದಲ್ಲಿ ಬೃಹತ್ ಬಹಿರಂಗ ಸಮಾವೇಶ ಜರುಗಲಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಆರ್. ಎಸ್.ಪಾಟೀಲ್ ಕುಚಬಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರ ನಾಮಪತ್ರ ಸಲ್ಲಿಕೆ ವೇಳೆ ವಿಶೇಷವಾಗಿ ರಾಜ್ಯ ಬಿಜೆಪಿ ನಾಯಕರುಗಳಾದ ವಿರೋಧ ಪಕ್ಷದ ಉಪನಾಯಕರಾದ ಅರವಿಂದ ಬೆಲ್ಲದ, ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ, ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ, ಕಲಬುರ್ಗಿ ಸಂಸದ ಉಮೇಶ ಜಾಧವ, ನಾರಾಯಣಸಾ ಭಾಂಡಗೆ, ಹಾಲಪ್ಪ ಆಚಾರ, ಜಗದೀಶ ಹಿರೇಮನಿ ಭಾಗಿಯಾಗಲಿದ್ದಾರೆ. ಜೊತೆಗೆ ಜಿಲ್ಲೆಯ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಎಲ್ಲಾ ನಾಯಕರು, ಪ್ರಮುಖರು ಹಾಗೂ ಸಾವಿರಾರು ಸಂಖ್ಯೆಯ ಕಾರ್ಯಕರ್ತರು ಶೋಭಾಯಾತ್ರೆ ಮತ್ತು ಸಮಾವೇಶದಲ್ಲಿ ಪಾಲ್ಗೊಂಡು ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರಿಗೆ ಶಕ್ತಿ ತುಂಬಲಿದ್ದಾರೆ ಎಂದು ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ್ ಕುಚಬಾಳ ತಿಳಿಸಿದ್ದಾರೆ.

## ಅಂಬೇಡ್ಕರ್ ಮಾನವೀಯ ತುಡಿತ ಅನನ್ಯ :ಬಾಬಾನಗರ



ಉದಯರಶ್ಮಿ ನ್ಯೂಸ್

ಆಲಮಟ್ಟಿ: ದೇಶದಲ್ಲಿ ಪ್ರಜಾಪ್ರಭುತ್ವ ಗಟ್ಟಿಯಾಗಿ ನೆಲೆಗೊಳ್ಳಲು ಸಂವಿಧಾನವೇ ಮೂಲ ಕಾರಣ.ಇಂಥ ಪವಿತ್ರ ಗ್ರಂಥದ ಅಡಿಯಲ್ಲಿ ಬದುಕು ಕಟ್ಟಿಕೊಳ್ಳಲು ಹಾಗೂ ಜೀವನದ ಪಯಣ ಸುಗಮವಾಗಿ ಸಾಗಿಸಲು ಅಂಬೇಡ್ಕರ್ ಅವರೇ ನಮಗೆಲ್ಲ ಪ್ರೇರಣೆ ಅಗಿದ್ದಾರೆ.ಅವರ ಮಾನವೀಯತೆ ತುಡಿತ ನಿಜಕ್ಕೂ ಅನನ್ಯ ಎಂದು ಮುಖ್ಯೋಪಾಧ್ಯಾಯ ಎನ್.ಬಿ.ಬಾಬಾನಗರ ಹೇಳಿದರು.

ಇಲ್ಲಿಗೆ ಸಮೀಪದ ಚಿಮ್ಮಲಗಿ ಭಾಗ-2 ಪುನರ್ವಸತಿ ಕೇಂದ್ರದಲ್ಲಿನ ಸರಕಾರಿ ಪ್ರೌಢಶಾಲೆಯಲ್ಲಿ ಭಾನುವಾರ ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ರವರ 133 ನೇ ಜನ್ಮ ದಿನಾಚರಣೆ ಅಂಗವಾಗಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಪ್ರಬುದ್ಧ ಸಮಾಜ,ಶೋಷಿತರ ಜೀವನ ಮಟ್ಟ ಸುಧಾರಿಸುವ ಕನಸು ಹೊಂದಿದ್ದ ಅಂಬೇಡ್ಕರ್ ಅವರ ಜೀವನ ಮೌಲ್ಯದ ಯಶೋಗಾಥೆ ದೇಶವಾಸಿಗಳಿಗೆಲ್ಲ ಸ್ಪೂರ್ತಿಯಾಗಿದೆ. ಸಮಗ್ರ ಗೌರವಾಧಾರಿತ ವ್ಯಕ್ತಿತ್ವದ ಹೆಗ್ಗಳಿಕೆಗೆ ಅಂಬೇಡ್ಕರ್ ಪಾತ್ರರಾಗಿದ್ದಾರೆ. ಅವರ ಕಳಕಳಿ, ಸಾಧನೆಯಿಂದಲೇ ಸಂವಿಧಾನದ ಅದ್ಭುತ ಗ್ರಂಥ ಮಾರ್ಗ ದೊರೆತಿ-ದೆ. ಅಂಬೇಡ್ಕರ್ ಅವರ ಚಿಂತನೆ ವಿಶ್ವದೆಲ್ಲೆಡೆ ಘಮಘಮಿಸಿದೆ ಎಂದು ಬಣ್ಣಿಸಿದರು.

ವಿಶ್ವಜ್ಞಾನಿ ಅಂಬೇಡ್ಕರ್ ಭಾವಚಿತ್ರಕ್ಕೆ ಹೂಮಾಲೆ ಹಾಕಿ ಪೂಜೆ ಸಲ್ಲಿಸಿ ಗೌರವಿಸಲಾಯಿತು.

ಈ ವೇಳೆ ಸಹ ಶಿಕ್ಷಕ ಎಚ್.ವಿ.ಪಾಪುಲರ್, ಎಂ.ಬಿ. ಸದಬ, ಗುರುಮಾತೆ ಶ್ರೀಮತಿ ವಿ.ಪಿ.ನಂದಾಪುರಮಠ, ಶ್ರೀಮತಿ ಜೆ.ಆಯ್.ಹೊಸಮನಿ, ಎಸ್.ಜಿ.ಹೊನವಾಡ, ಬಿ.ಎಚ್. ನಡಕೂರ ಇತರರಿದ್ದರು.

## ಪ್ರಜಾಪ್ರಭುತ್ವದ ರಕ್ಷಣೆಗಾಗಿ ಮತದಾನ ಮಾಡಿ :ಎಸಿ ಗದ್ಯಾಳ




ಉದಯರಶ್ಮಿ ನ್ಯೂಸ್

ಇಂಡಿ: ದೇಶ ಹಾಗೂ ಸಂವಿಧಾನದ ರಕ್ಷಣೆಗಾಗಿ ಕಡ್ಡಾಯವಾಗಿ ನೈತಿಕ ಮತದಾನ ಮಾಡಬೇಕು ಎಂದು ಸಹಾಯಕ ಚುನಾವಣೆ ಅಧಿಕಾರಿ ಮತ್ತು ಕಂದಾಯ ಉಪವಿಬಾಗಾಧಿಕಾರಿ ಅಬೀದ್ ಗದ್ಯಾಳ ಹೇಳಿದರು.


ಪಟ್ಟಣದ ಮಿನಿ ವಿಧಾನಸೌಧದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ ಜನ್ಮ ದಿನಾಚರಣೆ ನಿಮಿತ್ಯ ಪುರಸಭೆ ಕಾರ್ಮಿಕರಿಂದ ಸ್ವಚ್ಛತಾ ಕಾರ್ಯಕ್ರಮ ಮತ್ತು ಮತದಾನ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಬಾರಿ ಶೇ 100 ರಷ್ಟು ಮತದಾನದ ಗುರಿ ಹೊಂದಿದ್ದು ಮೇ.7 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಮತದಾನ ಮಾಡಬೇಕು.ಪ್ರಜಾಪ್ರಭುತ್ವದ ಈ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲು ಮತದಾರರು ಸಹಕ-ರಿಸಬೇಕು. ಆ ಮೂಲಕ ದೇಶದ ಅಭಿವೃದ್ದಿಗೆ ಸೂಕ್ತ ಅಭ್ಯರ್ಥಿ ಆಯ್ಕೆ ಮಾಡಬೇಕು ಎಂದರು.

ತಾವು ಸ್ವತಃ ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಡಾ. ಬಾಬಾ ಸಾಹೇಬ ಅಂಬೇಡಕರ ಜಯಂತಿ ನಿಮಿತ್ಯ ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ತಾ.ಪಂ ಯೋಜನಾಧಿಕಾರಿ ನಂದೀಪ ರಾಠೋಡ, ತಹಸೀಲ್ದಾರ ಮಂಜುಳಾ ನಾಯಕ, ಐ.ಇ.ಸಿ ಸಂಯೋಜಕ ರಾಮಗೌಡ ಸರಬಡಗಿ ಮತ್ತಿತರಿದ್ದರು.

## ಚಿಮ್ಮಡ: ಶ್ರೀಶೈಲ ಪಾದಯಾತ್ರಿಗಳ ಸ್ವ-ಗ್ರಾಮಾಗಮನ



ಉದಯರಶ್ಮಿ ನ್ಯೂಸ್

ಚಿಮ್ಮಡ: ಗ್ರಾಮದಿಂದ ಶ್ರೀಶೈಲ ಕ್ಷೇತ್ರಕ್ಕೆ ಪಾದಯಾತ್ರೆಯ ಮೂಲಕ ತೆರಳಿದ್ದ ಮುನ್ನೂರಕ್ಕೂ ಹೆಚ್ಚು ಜನ ಭಕ್ತಾದಿಗಳು ಇಂದು ಗ್ರಾಮದ ದ್ವಾರ ಬಾಗಿಲಿನ ಮೂಲಕ ಸ್ವಗ್ರಾಮ ಪ್ರವೇಶಿಸಿದರು.

ಕಳೆದ ಹದಿನೈದು ದಿನಗಳ ಹಿಂದೆ ಹೋಳಿ ಹುಣ್ಣಿಮೆ ಕರಿ ದಿನದಂದು ಗ್ರಾಮದಿಂದ ನೆರೆಯ ಆಂಧ್ರ ಪ್ರದೇಶದ ಶ್ರೀಶೈಲ ಕ್ಷೇತ್ರಕ್ಕೆ ಪಾದಯಾತ್ರೆ ಮೂಲಕ, ವಾಹನಗಳ ಮೂಲಕ ತೆರಳಿದ್ದ ನೂರಾರು ಜನ ಭಕ್ತಾಧಿಗಳು ಕಳೆದ ನಾಲ್ಕು ದಿನಗಳಿಂದ ಗ್ರಾಮದಿಂದ ಹೊರಗಡೆಯಿರುವ ದೇವಸ್ಥಾನಗಳಲ್ಲಿ, ಶಾಲೆಗಳಲ್ಲಿ ಬೀಡು ಬಿಟ್ಟಿದ್ದರು, ವಾಸ್ತವ್ಯ ವಿರುವ ಸ್ಥಳದಲ್ಲಿಯೇ ಪಾದಯಾತ್ರಿಗಳಿಗೆ ಕಳೆದ ಮೂರು ದಿನಗಳವರೆಗೆ ಊಟ ಮತ್ತು ಉಪಹಾರದ ವ್ಯವಸ್ಥೆಯನ್ನು ಮುಸ್ಲಿಂ ಸಮಾಜಬಾಂಧವರೂ ಸೇರಿದಂತೆ ಹಲವಾರು ಜನ ಭಕ್ತಾಧಿಗಳು ವ್ಯವಸ್ಥೆಗೊಳಿಸಿ ಸಾಮರಸ್ಯ ಮೆರೆದರು. ಪ್ರತೀತಿಯಂತೆ ಐದೇಶಿಯ ಐದು ದಿನಗಳ ಮುಂಚಿನ ದಿನವಾದ ರವಿವಾರ ಮುಂಜಾನೆ ಶ್ರೀ ಪ್ರಭು ಮಹಾಸ್ವಾಮಿಗಳಿಂದ ಮಂಗಳಾರತಿ ನೆರವೇರಿಸುವ ಮೂಲಕ ಪಾದಯಾತ್ರಿಗಳನ್ನು ಗ್ರಾಮದೊಳಗೆ ಬರಮಾಡಿಕೊಳ್ಳಲಾಯಿತು. ಶ್ರೀ ಮಲ್ಲಯ್ಯದೇವರ ಕಂಬಿಯನ್ನು ಶ್ರೀಗಳು ಹೆಗಲಮೇಲೆ ಹೊತ್ತು ಗ್ರಾಮದ ದ್ವಾರ ಬಾಗಿಲಿನ ಮೂಲಕ ಗ್ರಾಮ ಪ್ರವೇಶಿಸಿದರು.

ನಂತರ ಗುಡ್ಡದ ಶ್ರೀ ಪ್ರಭುಲಿಂಗೇಶ್ವರ ದೇವಸ್ಥಾನದಲ್ಲಿ ವೀಶೇಷ ಪೂಜೆ ಮದ್ಯಾಹ್ನದ ಪ್ರಸಾದ ಮಾಡಲಾಗಿತ್ತು ಸಂಜೆ ಗ್ರಾಮದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ನಡೆಯುವ ಮಹಾ ಮಂಗಲಪ್ರಸಾದ ಸ್ವೀಕಾರದೊಂದಿಗೆ ಪಾದಯಾತ್ರಿಗಳು ತಮ್ಮ ತಮ್ಮ ಮನೆಗಳಿಗೆ ತೆರಳಿದರು.

# ದೇಶಕ್ಕೆ ಡಾ.ಅಂಬೇಡ್ಕರ್ ಕೊಡುಗೆ ಅಪಾರ :ಶಾಸಕ ಯತ್ನಾಳ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಅಂಗವಾಗಿ ಭಾನುವಾರ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ನಗರದ ಡಾ. ಅಂಬೇಡ್ಕರ್ ವೃತ್ತದಲ್ಲಿರುವ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು.



ನಂತರ ಮಾತನಾಡಿದ ಅವರು, ಸಾಮಾಜಿಕ ಸಮಾನತೆ, ಅಸ್ಪೃಶ್ಯತೆ ನಿವಾರಣೆಗಾಗಿ ತಮ್ಮ ಜೀವನದುದ್ದಕ್ಕೂ ಶ್ರಮಿಸಿದ ಮಹಾನ್ ನಾಯಕರಾದ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರು ಜಗತ್ತಿಗೆ ಮಾದರಿಯಾದ ಸಂವಿಧಾನದ ನೀಡಿದ್ದಾರೆ. ದೇಶಕ್ಕೆ ನೀಡಿರುವ ಕೊಡುವೆ ಅಪಾರವಾದದ್ದು. ಆ ಕೊಡುಗೆಗಳನ್ನು ಸ್ಮರಿಸುವ ಹಾಗೂ ಅವರ ಉದ್ದೇಶಗಳನ್ನು ಈಡೇರಿಸುವ ಕೆಲಸವನ್ನು ಭಾರತೀಯ ಜನತಾ ಪಾರ್ಟಿ ಪ್ರಾಮಾಣಿಕವಾಗಿ ಮಾಡಿದೆ. ಎಲ್ಲಾ ಸಮುದಾಯಗಳಿಗೂ ನ್ಯಾಯ ಕಲ್ಪಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಡಾ.ಅಂಬೇಡ್ಕರ್ ಜಯಂತಿ ಅಂಗವಾಗಿ ಸಿದ್ಧಸಿರಿ ಸೌಹಾರ್ದ ಸಹಕಾರಿ ಸಂಘದ ವತಿಯಿಂದ ಅಲ್ಪೋಹಾರ, ತಂಪು ಪಾನಿಯ ವ್ಯವಸ್ಥೆ ಮಾಡಲಾಗಿತ್ತು.

ಮಹಾನಗರ ಪಾಲಿಕೆ ಸದಸ್ಯರಾದ ಪ್ರೇಮಾನಂದ ಬಿರಾದಾರ, ರಾಜಶೇಖರ ಕುರಿಯವರ, ಕುಮಾರ ಗಡಗಿ, ವಿಠ್ಠಲ ಹೊಸಪೇಟೆ, ಜವಾಹರ ಗೋಸಾವಿ, ಕಿರಣ ಪಾಟೀಲ, ವಿಜಯಪುರ ನಗರ ಮಂಡಲ ಅಧ್ಯಕ್ಷ ಶಂಕರ ಹೂಗಾರ, ಎಸ್.ಸಿ ಮೋರ್ಚಾ ಅಧ್ಯಕ್ಷ ಪ್ರಕಾಶ ಚವ್ಹಾಣ, ರೈತ ಮೋರ್ಚಾ ಅಧ್ಯಕ್ಷ ರಾಚು ಬಿರಾದಾರ, ಮುಖಂಡರಾದ ಪಾಂಡುಸಾಹುಕಾರ ದೊಡಮನಿ, ಮಹೇಶ ಒಡೆಯರ, ವಿಕ್ರಮ ಗಾಯಕವಾಡ, ಲಕ್ಷ್ಮಣ ಜಾಧವ, ಮಡಿವಾಳ ಯಾಳವಾರ, ಚಂದ್ರು ಚೌದರಿ, ಉಮೇಶ ವೀರಕರ, ವಿಠ್ಠಲ ನಡುವಿನಕೇರಿ, ಸತೋಷ ತಳಕೇರಿ, ಮನೋಹರ ಕಾಂಬ್ಳೆ, ವಿರೇಶ ವಾಲಿಕಾರ ಸೇರಿದಂತೆ ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಭಾಗವಹಿಸಿದ್ದರು.

# ದೇಶದ ಉಳಿವಿಗಾಗಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಿಸಿ :ಶಾಸಕ ಮನಗೂಳಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ರಾಜ್ಯದ ಕಟ್ಟ ಕಡೆಯ ವ್ಯಕ್ತಿಯೂ ಕೂಡಾ ನೆಮ್ಮದಿಯ ಜೀವನ ಕಳೆಯಬೇಕು ಎಂದು ಕನಸು ಕಟ್ಟಿದ ನಮ್ಮ ಕಾಂಗ್ರೆಸ್ ಸರಕಾರ ಚುನಾವಣೆ ಪೂರ್ವದಲ್ಲಿ ಕೊಟ್ಟ ಮಾತಿನಂತೆ ಪಂಚ ಯೋಜನೆಗಳು ಮನೆ ಮನೆಗೆ ತಲುಪಿಸುವ ಪ್ರಾಮಾಣಿಕ ಕೆಲಸ ಮಾಡುತ್ತಿದೆ ದೇಶದ ಉಳಿವಿಗಾಗಿ ಮತ್ತು ಏಳಿಗೆಗಾಗಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಬೇಕು ಎಂದು ಶಾಸಕ ಅಶೋಕ ಮನಗೂಳಿ ಮನವಿ ಮಾಡಿದರು.



ಪಟ್ಟಣದ ಸಿಂದಗಿ ನಗರದ ಕಾಂಗ್ರೆಸ್ ಪಕ್ಷದ ವತಿಯಿಂದ ವಾರ್ಡ್ ನಂ.9 ಮತ್ತು 17ರಲ್ಲಿ ವಿಜಯಪುರ ಲೋಕಸಭಾ ಚುನಾವಣೆ ಅಂಗವಾಗಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ಗಳನ್ನು ಶಾಸಕ ಅಶೋಕ ಮನಗೂಳಿ ಬಿಡುಗಡೆಗೊಳಿಸಿ ಮಾತನಾಡಿದರು.

ಕೇಂದ್ರ ಬಿಜೆಪಿ ಸರ್ಕಾರ ಕೇವಲ ಸುಳ್ಳು ಭರವಸೆಗಳನ್ನು ನೀಡುವ ಮೂಲಕ ದೇಶದ ಜನರ ದಿಕ್ಕು ತಪ್ಪಿಸುತ್ತಿದೆ. ದೇಶದ ಅಭಿವೃದ್ಧಿ ವಿಚಾರದಲ್ಲಿ, ಯುವಕರಿಗೆ ಉದ್ಯೋಗದ ವಿಚಾರದಲ್ಲಿ, ಮಹಿಳಾ ಸ್ವಾವಲಂಬನೆಯ ವಿಚಾರ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಕೇಂದ್ರ ಸರ್ಕಾರ ಸುಳ್ಳಿನ ಭರವಸೆಯನ್ನು ನೀಡಿ ಜನರನ್ನು ಮರಳು ಮಾಡುತ್ತಿದೆ. ಹತ್ತು ವರ್ಷದ ಅಧಿಕಾರ ಅವಧಿಯಲ್ಲಿ ಈ ದೇಶ ಸಂಪೂರ್ಣವಾಗಿ ಅಭಿವೃದ್ಧಿಯ ಪಥದಲ್ಲಿ ಸಾಗಬೇಕಾಗಿತ್ತು. ಆದರೆ ಇನ್ನು ಈ ದೇಶದಲ್ಲಿ ಜ್ವಲಂತ ಸಮಸ್ಯೆಗಳು ಹಾಗೆ ಉಳಿದುಕೊಂಡಿವೆ ಎಂದು ಕೇಂದ್ರ ಸರಕಾರದ ವಿರುದ್ಧ ಕಿಡಿಕಾರಿದರು.

ಈ ವೇಳೆ ಪಂಚ ಯೋಜನೆ ಪ್ರಾಧಿಕಾರದ ತಾಲೂಕ ಅಧ್ಯಕ್ಷ ಶ್ರೀಶೈಲ್ ಕವಲಗಿ ಮಾತನಾಡಿ, ಕಾಂಗ್ರೆಸ್ ಪಕ್ಷ ಈ ದೇಶದ ಸಮಗ್ರ ಅಭಿವೃದ್ಧಿಗೆ ಸದಾ ತುಡಿಯುತ್ತಿರುವ ಪಕ್ಷ ಈ ಬಾರಿಜನ ಬದಲಾವಣೆಯನ್ನು ಬಯಸಿದ್ದಾರೆ. ಆ ನಿಟ್ಟಿನಲ್ಲಿ ವಿಜಯಪುರ ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿರಾಜು ಆಲಗೂರ ಅವರ ಗೆಲವು ಖಚಿತವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಯೋಜನೆಯ ಸದಸ್ಯರಾದ ಸುನಂದಾ ಯಂಪೂರೆ, ಕೆಡಿಪಿ ಸದಸ್ಯೆ ಮಹಾನಂದಾ ಬಮ್ಮಣ್ಣಿ, ರಜತ ತಾಂಬೆ, ಪುರಸಭೆ ಸದಸ್ಯರಾದ ಹಸೀಮ ಆಳಂದ, ಸಂದೀಪ ಚೌರ ಆಶ್ರಯ ಸಮಿತಿ ನಾಮ ನಿರ್ದೇಶಕ ಸದಸ್ಯರಾದರ ಹೀಮ ದುದನಿ, ಅಮೀನುದ್ದಿನ ವಾಲೀಕಾರ, ಭೀಮು ವಾಲೀಕಾರ, ಇಸ್ಮಾಯಿಲ್ ಆಳಂದ, ಚಾಂದಸಾಬ ಆಲಮೇಲ, ಅಹ್ಮದ್ ಸಿಂಧೆ, ಬಂದೇನವಾಜ್ ಕರ್ಜಗಿ, ಮೈಬುಸಾಬ ಕರ್ಜಗಿ, ಮೈಬೂಬ್ ಮರ್ತುರ, ಸೇರಿದಂತೆ ಪಕ್ಷದ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆಯಲ್ಲಿ ಡಿಸಿ ಟಿ.ಭೂಬಾಲನ್ ಅಭಿಮತ

# ಅಂಬೇಡ್ಕರ್ ಅವರನ್ನು ನಿತ್ಯ ಸ್ಮರಿಸುವ ಕಾರ್ಯವಾಗಬೇಕು

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಗತ್ತಿನಲ್ಲಿಯೇ ಶ್ರೇಷ್ಠ ಸಂವಿಧಾನ ರಚಿಸಿದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರನ್ನು ಪ್ರತಿಯೊಬ್ಬರು ಪ್ರತಿನಿತ್ಯ ಸ್ಮರಿಸಿ ಅವರ ಸಂದೇಶಗಳನ್ನು ಪಾಲಿಸುವುದರ ಮೂಲಕ ಸಂವಿಧಾನವನ್ನು ಗೌರವಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಕರೆ ನೀಡಿದರು.



ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಿಲ್ಲಾಡಳಿತದ ವತಿಯಿಂದ ರವಿವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅತ್ಯಂತ ಸರಳ ಹಾಗೂ ಅರ್ಥಪೂರ್ಣವಾಗಿ ಹಮ್ಮಿಕೊಂಡ ಜಯಂತಿ ಕಾರ್ಯಕ್ರಮದಲ್ಲಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಡಾ.ಬಾಬಾಸಾಹೇಬ್ ಅಂಬೇಡ್ಕರವರು ಬಡವರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ಸೇರಿದಂತೆ ಬಡ ದೀನ ದಲಿತರ ಜೀವನ ಮಟ್ಟ ಸುಧಾರಿಸಲು, ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದವರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಮಾನ ಅವಕಾಶ ಕಲ್ಪಿಸಿ, ಮೂಲಭೂತ ಸೌಲಭ್ಯಗಳೊಂದಿಗೆ ಸುಭದ್ರ ಜೀವನ ಕಟ್ಟಿಕೊಳ್ಳಬೇಕೆಂಬುದು ಆಶಯ ಹೊಂದಿದ ಡಾ.ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳು, ಸಂವಿಧಾನದ ಆಶಯಗಳ ಕುರಿತು ಪ್ರತಿಯೊಬ್ಬ ನಾಗರಿಕನು ಅರಿವು ಹೊಂದಿಬೇಕು. ಈ ನಿಟ್ಟಿನಲ್ಲಿ ಪ್ರತಿಯೊಂದು ಮನೆ– ಶಾಲೆಗಳಲ್ಲಿ ಅವರ ಆದರ್ಶ, ವಿಚಾರಗಳ ಕುರಿತು ಅರಿವು ಸಂವಿಧಾನ ಜಾಗೃತಿ ಜಾಥಾ ಮೂಲಕ ಅರಿವು ಮೂಡಿಸಲಾಗುತ್ತಿದೆ. ಕೇವಲ ಜಯಂತಿ ಕಾರ್ಯಕ್ರಮಗಳ ದಿನದಂದೇ ಇಂತಹ ಮಹಾನ್ ವ್ಯಕ್ತಿಯನ್ನು ಸ್ಮರಿಸದೇ ಪ್ರತಿನಿತ್ಯ, ಪ್ರತಿಕ್ಷಣವೂ ಪ್ರತಿಯೊಬ್ಬರು ಸ್ಮರಿಸುವ ಮೂಲಕ ಸಂವಿಧಾನಕ್ಕೆ ಗೌರವ ನೀಡುವ ಕೆಲಸವಾಗಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಸಾಮಾಜಿಕ ನೋವುಗಳ ಅರಿವು ಹೊಂದಿದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಕಾನೂನು ಶಾಸ್ತ್ರ, ಸಮಾಜಶಾಸ್ತ್ರ ಸೇರಿದಂತೆ ಅನೇಕ ವಿಷಯಗಳಲ್ಲಿ ಪರಿಣಿತರಾಗಿದ್ದ ಅವರು, ಸಮಾಜದಲ್ಲಿನ ಶೋಷಿತ ವರ್ಗಗಳ ನ್ಯಾಯಕ್ಕಾಗಿ ಶ್ರಮಿಸಿ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸಮಾನತೆಗಾಗಿ ಹೋರಾಟ ಮಾಡಿದವರು. ದಲಿತ, ಮಹಿಳೆಯರ, ಹಿಂದುಳಿದ ವರ್ಗಗಳ ಜನರ ಏಳಿಗೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕು ಎಂದು ಹೇಳಿದರು.

ಸಂವಿಧಾನದಲ್ಲಿ ಎಲ್ಲ ಆದರ್ಶಗಳನ್ನು ಅಳವಡಿಸುವ ಮೂಲಕ ಜನತೆಗೆ ಸಮಾನತೆಯನ್ನು ಒದಗಿಸಿದ ಡಾ.ಬಿ.ಆರ್. ಅಂಬೇಡ್ಕರ್ ಅವರು ರಚಿಸಿದ ಭಾರತದ ಸಂವಿಧಾನ ಶ್ರೇಷ್ಠ ಸಂವಿಧಾನವಾಗಿದೆ. ಸಾಮಾಜಿಕ ಪರಿಕಲ್ಪನೆ ಹೊಂದಿದ ಅವರು ಸಮಾಜದಲ್ಲಿರುವ ಪ್ರತಿಯೊಬ್ಬ ಪ್ರಜೆಯು ಕೂಡ ಗೌರವದಿಂದ, ಸ್ವಾಭಿಮಾನದಿಂದ ಬದುಕಬೇಕು ಎಂಬ ಹಿತದೃಷ್ಟಿಯಿಂದ ಮೂಲಭೂತ ಹಕ್ಕು ಮತ್ತು ಕರ್ತವ್ಯಗಳನ್ನು ಸಂವಿಧಾನದಲ್ಲಿ ಅಳವಡಿಸಿದ್ದಾರೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ ಸೋನಾವಣೆ ಅವರು ಮಾತನಾಡಿ, ಸಮಾಜದಲ್ಲಿ ಎಲ್ಲರೂ ನೆಮ್ಮದಿಯಿಂದ, ಶಾಂತಿಯುತವಾಗಿ ಬಾಳುವಂತ ಅವಕಾಶವನ್ನು ಕಲ್ಪಿಸಿಕೊಟ್ಟ ಡಾ.ಬಿ.ಆರ್.ಅಂಬೇಡ್ಕರ್ ಅವರ ಆದರ್ಶ ವಿಚಾರಧಾರೆಗಳನ್ನು ಪ್ರತಿಯೊಬ್ಬರು ಪಾಲಿಸಬೇಕು ಎಂದು ಹೇಳಿದರು.

ಇದಕ್ಕೂ ಮೊದಲು ಬೆಳಿಗ್ಗೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿರುವ ಡಾ.ಬಾಬಾಸಾಹೇಬ ಪುತ್ಥಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ ಸೊನಾವಣೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ತಹಶೀಲ್ದಾರ ಕವಿತಾ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪುಂಡಲೀಕ ಮಾನವರ, ವಿವಿಧ ಸಮಾಜದವರಾದ ಅಭಿಷೇಕ ಚಕ್ರವರ್ತಿ, ಸಿದ್ದು ರಾಯಣ್ಣನವರ, ಅಡಿವೆಪ್ಪ ಸಾಲಗಲ್, ಫಯಾಜ ಕಲಾದಗಿ, ಆನಂದ ಔದಿ, ಎಂ.ಸಿ.ಮುಲ್ಲಾ, ರವಿ ಕಿತ್ತೂರ, ಅರುಣ ಗವಾರಿ, ಪ್ರಶಾಂತ ತೊರವಿ, ಚಂದ್ರಶೇಖರ ಚಕ್ರವರ್ತಿ, ಮಲ್ಲು ಬಿದರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಚನಗಳ ಮೂಲಕವೇ ಸಾಮಾಜಿಕ ಕ್ರಾಂತಿ :ಪ್ರಭು ಶ್ರೀ

**ಉದಯರಶ್ಮಿ ನ್ಯೂಸ್**

ಚಿಮ್ಮಡ: ಆದ್ಯ ವಚನಕಾರ ದೇವಾಂಗ ಸಮಾಜದ ಆರಾಧಕ ದೇವರ ದಾಸಿಮಯ್ಯನವರ ಆದರ್ಶ ಮನುಕುಲಕ್ಕೆ ಸಂದೇಶ ನೀಡಿದೆಯೆಂದು ಸ್ಥಳೀಯ ವಿರಕ್ತಮಠದ ಶ್ರೀ ಪ್ರಭು ಮಹಾಸ್ವಾಮಿಗಳು ಹೇಳಿದರು.




ಗ್ರಾಮದ ದಾಸಿಮಯ್ಯ ವೃತ್ತದಲ್ಲಿ ಶನಿವಾರ ಸಂಜೆ ಹಮ್ಮಿಕೊಳ್ಳಲಾಗಿದ್ದ ದೇವರ ದಾಸಿಮಯ್ಯನವರ ಜಯಂಯೋತ್ಸವ ಕಾರ್ಯಕ್ರಮದಲ್ಲಿ ಸಾನಿಧ್ಯವಹಿಸಿ ಮಾತನಾಡಿದ ಅವರು, ದಾಸಿಮಯ್ಯನವರು ಒಂದೇ ಕುಲಕ್ಕೆ ಸಿಮಿತವಾಗಿರದೆ ಇಡೀ ಮನುಕುಲಕ್ಕೇ ಸಂದೇಶನೀಡುವ ಮಹಾನ್ ವ್ಯಕ್ತಿಯಾಗಿದ್ದರು, ಅವರ ವಚನ ಸಾಹಿತ್ಯ ನಾಡಿನೆಲ್ಲೆಡೆ ಮನೆಮಾತಾಗಿದ್ದು ವಚನಗಳ ಮೂಲಕವೇ ಸಾಮಾಜಿಕ ಕ್ರಾಂತಿ ಮಾಡಿದ್ದಾರೆಂದರು.

ರಘುನಾಥ ಪ್ರೀಯ ಸಾಧು ಮಹಾರಾಜರ ಮಠದ ಶ್ರೀ ಜನಾರ್ಧನ ಮಹಾರಾಜರು ಮಾತನಾಡಿ 11ನೇ ಶತಮಾನದಲ್ಲಿಯೇ ವಚನಗಳನ್ನು ರಚಿಸುವ ಮೂಲಕ ಸಮಾಜರ ಓರೆ ಕೋರೆಗಳನ್ನು ತಿದ್ದಿದ ಕೀರ್ತಿ ದೇವರ ದಾಸಿಮಯ್ಯನವರಿಗೆ ಸಲ್ಲುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದೇವಾಂಗ ಸಮಾಜದ ಪ್ರಮುಖರಾದ ಶ್ರೀಕಾಂತ ಜಾಡಗೌಡರ ವಹಿಸಿದ್ದರು, ಅಶೋಕ ಧಡೂತಿ, ರಾಮಣ್ಣ ಬಗನಾಳ, ಗ್ರಾಂ.ಪಂ. ಮಾಜಿ ಅಧ್ಯಕ್ಷ ಗುರಲಿಂಗಪ್ಪಾ ಪೂಜಾರಿ, ಬೀರಪ್ಪಾ ಹಳೆಮನಿ, ಮನೋಜ ಹಟ್ಟಿ, ಚನ್ನಪ್ಪಾ ಬಿಳ್ಳೂರ, ಬಸವರಾಜ ಕುಂಚನೂರ, ದುಂಡಪ್ಪಾ ಪಾಟೀಲ, ಪರಪ್ಪಾ ಬರಗಲ್, ಸುರೇಶ ಅಥಣಿ, ಬಸವರಾಜ ಕರಡಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

## ಡಾ. ಬಿ ಆರ್ ಅಂಬೇಡ್ಕರ್ ಜಯಂತಿಗೆ ಗ್ರಾಪಂ ಪಿಡಿಓ ಬಾರದ ಹಿನ್ನೆಲೆ

# ಅಂಜುಟಗಿ ಗ್ರಾಪಂಗೆ ಬೀಗ ಜಡಿದು ಪ್ರತಿಭಟನೆ

**ಉದಯರಶ್ಮಿ ನ್ಯೂಸ್**

ಇಂಡಿ: ಡಾ. ಬಿ ಆರ್ ಅಂಬೇಡ್ಕರ್ ಅವರ ಜಯಂತಿಗೆ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬಾರದ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತ್ ಗೆ ಬೀಗ ಜಡಿದು ಪ್ರತಿಭಟನೆ ನಡೆಸಿರುವ ಘಟನೆ ಭಾನುವಾರ ತಾಲ್ಲೂಕಿನಲ್ಲಿ ನಡೆದಿದೆ.



ಇಡೀ ದೇಶಾದ್ಯಂತ ಸರಕಾರದ ಆದೇಶದಂತೆ ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ ಜಯಂತಿ ಆಚರಣೆ ಮಾಡುತ್ತಾರೆ. ಆದರೆ ತಾಲ್ಲೂಕಿನ ಅಂಜುಟಗಿ ಗ್ರಾಮ ಪಂಚಾಯತಿಯಲ್ಲಿ ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕಾರ್ಯಕ್ರಮಕ್ಕೆ ಬಾರದೆ ನಿರ್ಲಕ್ಷ್ಯ ತೋರಿ ಅಪಮಾನಗೊಳಿಸಿದ್ದಾರೆಂದು ಗ್ರಾಮಸ್ಥರು ಹಾಗೂ ಸಂಘಟಕರು ಪಂಚಾಯತ್ ಬೀಗ ಜಡಿದು ಪ್ರತಿಭಟನೆ ಮಾಡಿದ್ದಾರೆ.

ನಮ್ಮ ರಾಷ್ಟ್ರ ಕಂಡ ಶ್ರೇಷ್ಠ ನಾಯಕರಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಪ್ರಮುಖರು. ಅವರ ವಿಚಾರಧಾರೆಗಳು ಇಂದಿಗೂ ಪ್ರಸ್ತುತ. ಅವರು ಸಾಮಾಜಿಕವಾಗಿ ಮೂಡಿಸಿದ ಸಂಚಲನಗಳು ಅಷ್ಟು ಹಿರಿದಾಗಿದ್ದವು. ಇವರ ತತ್ವ ಆದರ್ಶಗಳು ಸುಂದರ ಸಮಾಜವನ್ನು ನಿರ್ಮಿಸುವಂತಿದೆ. ಅದೂ ಅಲ್ಲದೆ, ಪ್ರತಿಯೊಬ್ಬ ಭಾರತೀಯರ ಪಾಲಿನ ಪವಿತ್ರ ಗ್ರಂಥವಾದ ಸಂವಿಧಾನದ ಹಿಂದಿನ ದೊಡ್ಡ ಶಕ್ತಿ ಬಾಬಾ ಸಾಹೇಬ್ ಅಂಬೇಡ್ಕರ್. ಅವರ ಸಾಧನೆ, ದೇಶಕ್ಕೆ ಕೊಟ್ಟ ಕೊಡುಗೆಯನ್ನು ಸ್ಮರಿಸಲು ಏಪ್ರಿಲ್ 14ರಂದು ಪ್ರತಿವರ್ಷ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗುತ್ತದೆ. ಇಂತಹ ಮಹತ್ವದ ದಿನದಂದು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ನಿರ್ಲಕ್ಷ್ಯತೋರಿ ಜಯಂತಿಗೆ ಬಾರದೆ ಇರುವುದು ಅತ್ಯಂತ ನೋವು ತಂದಿದೆ ಎಂದು ಡಾ. ಬಿ ಆರ್ ಅಂಬೇಡ್ಕರ್ ಅಭಿಮಾನಿಗಳು ಅಳಲು ತೊಡಗಿಕೊಂಡಿದ್ದಾರೆ.

ಪ್ರತಿಭಟನೆ ಸುದ್ದಿ ತಿಳಿದ ತಕ್ಷಣ ತಹಶಿಲ್ದಾರ ಮಂಜುಳಾ ನಾಯಿಕ ಗ್ರಾಮ ಪಂಚಾಯತಗೆ ಧಾವಿಸಿ ಸಮಸ್ಯೆ ಬಗ್ಗೆ ಆಲಿಸಿದರು. ಅಲ್ಲಿರುವ ಸ್ಥಳೀಯರು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಡಾ ಬಿ ಆರ್ ಅಂಬೇಡ್ಕರ್ ಜಯಂತಿಗೆ ಹಾಜರಾಗದೇ ನಿರ್ಲಕ್ಷ್ಯ ತೋರಿದ್ದಾರೆ ಎಂದು ಆರೋಪ ಮಾಡಿ, ಅಧಿಕಾರಿ ವಿರುದ್ಧ ಕ್ರಮಕ್ಕೆ ಆಗ್ರಹಿಸಿದರು. ಪ್ರತಿಭಟನಕಾರರಿಗೆ ಸ್ಪಂದಿಸಿದ ತಹಶಿಲ್ದಾರ ಅವರು ಪಿಡಿಓ ಅವರಿಗೆ ನೋಟಿಸ್ ಕೊಡಲಾಗುವುದು ಎಂದು ಮನವೊಲಿಸಿ ಅವರನ್ನು ಪ್ರತಿಭಟನೆಯಿಂದ ಹಿಂದೆ ಸರಿಸಿದರು.

ಈ ಸಂದರ್ಭದಲ್ಲಿ ಯಜಮಾನ ಶಿವಶರಣ, ಅವದುತ ದೊಳ್ಳೆನವರ, ಮರೆಪ್ಪ ದೊಳ್ಳೆನವರ,

ಮಾದೇಶ್ ಜ್ಯಾಬೇನವರ, ಹಣಮಂತ ಅಂಜುಟಗಿ ಹಾಗೂ ಇನ್ನೂ ಅನೇಕರು ಉಪಸ್ಥಿತರಿದ್ದರು.

> “ ಪಿಡಿಓ ಅವರಿಗೆ ಅಂಜುಟಗಿ ಮತ್ತು ನಿಂಬಾಳ ಎರಡು ಗ್ರಾಮ ಪಂಚಾಯತ್ ಜವಾಬ್ದಾರಿ ಹೊಂದಿರುವುದರಿಂದ, ಒಂದು ಕಡೆ ಮುಗಿಸಿಕೊಂಡು ಇನ್ನೊಂದು ಕಡೆ ಬರಬೇಕಾದರೆ ತಡವಾಗಿದೆ. ಹಾಗಾಗಿ ಈ ಸಮಸ್ಯೆ ಉಂಟಾಗಿದೆ. ಅದಲ್ಲದೇ ಸ್ಥಳಕ್ಕೆ ತಹಶಿಲ್ದಾರ ಮಂಜುಳಾ ನಾಯಿಕ ಬೇಟಿ ನೀಡಿ ಸಮಸ್ಯೆ ಬಗಿಹರಿಸಿದ್ದಾರೆ.”
>
> – ನೀಲಗಂಗಾ ಎಸ್ ಬಿ
>
> ತಾಪಂ ಕಾರ್ಯನಿರ್ವಾಹಕ ಅಧಿಕಾರಿ

# ಜಿಲ್ಲೆಯ ಅಭಿವೃದ್ಧಿಗೆ ಕಾಂಗ್ರೆಸ್ಸಿಗೆ ಮತ ನೀಡಿ :ಶಂಕರಗೌಡ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ವಿಜಯಪುರ ಜಿಲ್ಲೆಯ ಸಮಗ್ರ ಅಭಿವೃದ್ಧಿ ಆಗಬೇಕಾದರೆ ಕಾಂಗ್ರೆಸ್ ಪಕ್ಷದ ಲೋಕಸಭೆ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರನ್ನು ಲೋಕಸಭೆ ಚುನಾವಣೆಯಲ್ಲಿ ಮತಬಾಂಧವರು ಆಯ್ಕೆ ಮಾಡಬೇಕೆಂದು ಕಾಂಗ್ರೆಸ್ ಮುಖಂಡ ಶಂಕರಗೌಡ ಬಿರಾದಾರ ಹೇಳಿದರು.




ಪಟ್ಟಣದ ಲಕ್ಷ್ಮೀ ನಗರ, ಶಿವನಗುಡಿ, ಶಿವಾಜಿ ಗಲ್ಲಿಗಳಲ್ಲಿ ಲೋಕಸಭಾ ಚುನಾವಣೆಯ ಪ್ರಯುಕ್ತ ಭಾನುವಾರ ಸಂಜೆ ಮನೆ ಮನೆಗೆ ತೆರಳಿ ಪ್ರಚಾರ ಕೈಗೊಂಡು ನಂತರ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಿಂದ ವಿಜಯಪುರ ಜಿಲ್ಲೆಯ ಸಂಸದ ಸದಸ್ಯ ರಮೇಶ ಜಿಗಜಿಣಗಿ ಅವರು ಸಂಸತ್ತಿನಲ್ಲಿ ವಿಜಯಪುರ ಜಿಲ್ಲೆಯ ಅಭಿವೃದ್ಧಿ ಕುರಿತು ಮಾತನಾಡಲು ವಿಫಲರಾಗಿದ್ದರೆ. ಸಂಸತ್ ಅಧಿವೇಶನದಲ್ಲಿ ಜಿಲ್ಲೆಯ ಅಭಿವೃದ್ಧಿ ಕುರಿತು ಹತ್ತು ವರ್ಷಗಳಲ್ಲಿ ಒಮ್ಮೆಯೂ ಕೂಡಾ ಮಾತನಾಡಿಲ್ಲ. ಅಂಥವರನ್ನು ಸಂಸತ್ತಿಗೆ ಕಳಿಸುವುದರಿಂದ ಜಿಲ್ಲೆಯ ಅಭಿವೃದ್ಧಿ ಕುಂಠಿತವಾಗುತ್ತದೆ.

ವಿಜಯಪುರ ಜಿಲ್ಲೆಯ ಜ್ವಲಂತ ಸಮಸ್ಯೆಗಳಾದ ಕೃಷ್ಣೆ ನದಿಯ ನೀರಾವರಿ ಯೋಜನೆಯನ್ನು ರಾಷ್ಟ್ರೀಯ ನೀರಾವರಿ ಯೋಜನೆಯನ್ನಾಗಿ ಮಾಡಬೇಕು. ವಿಜಯಪುರದಿಂದ ಬೆಂಗಳೂರಿಗೆ ವಿಜಯಪುರದಿಂದ ಮುಂಬೈ ಹಾಗೂ ಹೈದ್ರಾಬಾದಕ್ಕೆ ತೆರಳಲು ಸೂಕ್ತವಾದ ರೈಲಿನ ವ್ಯವಸ್ಥೆಗಳಿಲ್ಲ. ವಿಜಯಪುರ ನಗರದ ಹಿಟ್ಟನಹಳ್ಳಿ ಹತ್ತಿರ ಇರುವ ರಾಷ್ಟ್ರೀಯ ಹೆದ್ದಾರಿಯ ಟೋಲವು ವಿಜಯಪುರ ನಗರದ ಸಮೀಪದಲ್ಲಿ ಇರುವುದರಿಂದ ಜನಸಾಮಾನ್ಯರಿಗೆ ತುಂಬಾ ಹೊರೆಯಾಗಿದೆ. ಈ ಟೋಲ ಗೇಟ್ ವಿರುದ್ಧ ಸಾಕಷ್ಟು ಬಾರಿ ಹೋರಾಟ ಮಾಡಿದರೂ ಪ್ರಯೋಜನವಾಗಿಲ್ಲ. ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಕಾರ್ಯಗಳು ಕೂಡಾ ಪತ್ರಿಕೆ ಹೇಳಿಕೆಗಳಲ್ಲಿ ಮಾತ್ರ ಆಗಿವೆ. ಇಲ್ಲಿಯವರೆಗೆ ಮನಗೂಳಿ ಹಾಗೂ ನಿಡಗುಂದಿ ಹತ್ತಿರ ಫ್ಲೈಓವರ್ ಕಾಮಗಾರಿಗಳನ್ನು ಮಾಡಿಲ್ಲ. ವಿಜಯಪುರ ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿ ಚತುಃಭುಜ ರಸ್ತೆ ಆಗಬೇಕು. ವಿಜಯಪುರ ಕಲ್ಬುರ್ಗಿ ಮನಗೂಳಿ ದೇವಾಪುರ ಕ್ರಾಸ್ ಬಿಜ್ಜಳ ರಾಜ್ಯ ಹೆದ್ದಾರಿ ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತನೆ ಆಗಬೇಕು. ವಿಮಾನ ನಿಲ್ದಾಣದ ಕಾಮಗಾರಿ ಕೂಡಾ ನಿಧಾನಗತಿಯಲ್ಲಿ ಸಾಗುತ್ತಿದೆ. ಆದ ಕಾರಣ ಸಂಸತ್ತಿನಲ್ಲಿ ವಿಜಯಪುರ ಜಿಲ್ಲೆಯ ಸಮಗ್ರ ಅಭಿವೃದ್ಧಿಯ ಬಗ್ಗೆ ಗಟ್ಟಿ ಧ್ವನಿಯಾಗಿ ನಿಲ್ಲಲು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರಿಗೆ ಮತವನ್ನು ನೀಡಿ ಗೆಲ್ಲಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅದ್ಯಕ್ಷ ಸುರೇಶ ಹಾರಿವಾಳ, ನಗರ ಘಟಕದ ಅಧ್ಯಕ್ಷ ಸುರೇಶಗೌಡ ಪಾಟೀಲ, ಪುರಸಭೆ ಸದಸ್ಯರಾದ ಪ್ರವೀಣ ಪೂಜಾರಿ, ಜಗದೇವಿ ಗುಂಡಳ್ಳಿ, ಮುಖಂಡರಾದ ಸಂಗಮೇಶ ಓಲೇಕಾರ, ಶೇಖರ ಗೊಳಸಂಗಿ, ರವಿ ರಾಠೋಡ, ಮುರುಗೇಶ ನಾಯ್ಕೋಡಿ, ಭದ್ರು ಮಣ್ಣೂರ, ರಮಜಾನ ಹೆಬ್ಬಾಳ, ಪರುಶುರಾಮ ಬೆಕಿನಾಳ, ಮಹಿಬೂಬ ನಾಯ್ಕೋಡಿ, ಮಹಾಂತೇಶ ಸಾಸಾಬಾಳ ,ಅಜೀಜ ಬಾಗವಾನ, ಜಟ್ಟಿಂಗರಾಯ ಮಾಲಗಾರ, ಕಮಲಸಾಬ ಕೊರಬು, ಸಂಗನಬಸು ಪೂಜಾರಿ, ಬಸವರಾಜ ಚೌರಿ, ಮಡಿವಾಳಪ್ಪ ವಾಲಿಕಾರ, ಪರುಶುರಾಮ ಜಮಖಂಡಿ, ಸಂಗಮೇಶ ಕಾಳಹಸ್ತೇಶ್ವರಮಠ, ಸಂತೋಷ ಬಿರಾದಾರ, ಬಾಬು ಬಂಗಾರಿ, ಹಣಮಂತ ಪಿರಂಗಿ, ಪರಶುರಾಮ ಮ್ಯಾಗೇರಿ, ಶಂಕರ ಮ್ಯಾಗೇರಿ ಕಾಂಗ್ರೆಸ್ ಕಾರ್ಯಕರ್ತರು ಬಾಗವಹಿಸಿದ್ದರು.

## ಸಾಯಿಬಾಬಾ ದೇಗುಲದಲ್ಲಿ ವಿಶೇಷ ಪೂಜೆ ಇಂದು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಶ್ರೀ ರಾಮನವಮಿಯ ನಿಮಿತ್ಯ ಪಟ್ಟಣದ ಆಲಮಟ್ಟಿ ರಸ್ತೆಯಲ್ಲಿರುವ ಶ್ರೀ ಸಾಯಿಬಾಬಾ ದೇವಸ್ಥಾನದಲ್ಲಿ ಶ್ರೀ ಸಾಯಿಬಾಬಾರಿಗೆ ಅಭಿಷೇಕ, ಸತ್ಯನಾರಾಯಣ ಪೂಜೆ, ಮಹಾಮಂಗಳಾರತಿ ನಂತರ ಮಹಾ ಪ್ರಸಾದ ಕಾರ್ಯಕ್ರಮಗಳು ಜರುಗಲಿದ್ದು, ಭಕ್ತಾದಿಗಳು ಆಗಮಿಸಿ ಬಾಬಾ ರ ಕೃಪೆಗೆ ಪಾತ್ರರಾಗುವಂತೆ ಪ್ರಕಟಣೆ ತಿಳಿಸಿದೆ.

# ಕೆಂಭಾವಿ: ಡಾ.ಅಂಬೇಡ್ಕರ್ 133ನೇ ಜಯಂತಿ

**ಉದಯರಶ್ಮಿ ನ್ಯೂಸ್**

ಕೆಂಭಾವಿ: ಪಟ್ಟಣದಲ್ಲಿ ಹಳೆಯ ಬಸ್ ಸ್ಟ್ಯಾಂಡ್ ಹತ್ತಿರ ಡಾ ಬಿ.ಆರ್.ಅಂಬೇಡ್ಕರ್ ಅವರ ಮೂರ್ತಿಗೆ ಆದಿತ್ಯ ಗೌಡ ಪೊಲೀಸ್ ಪಾಟೀಲ್ ಹಾಗೂ ರಮೇಶ ಗೊಂದನಕರ್ ಮಲ್ಲಿಕಾರ್ಜುನ್ ಪಾಟೀಲ್ ಉಪ ತಹಸಿಲ್ದಾರ್ ಕೆಂಭಾವಿ ಮಾಲಾರ್ಪಣೆ ಮಾಡುವ ಮೂಲಕ ಬಾಬಾ ಸಾಹೇಬ್ ಡಾಕ್ಟರ್ ಬಿಆರ್ ಅಂಬೇಡ್ಕರ್ ಅವರ 133ನೇ ಜಯಂತಿಯನ್ನು ಆಚರಿಸಲಾಯಿತು.



ಇದೇ ಸಂದರ್ಭದಲ್ಲಿ ಲಾಲಪ್ಪ ಆಲ್ಹಾಳ, ಧರ್ಮಣ್ಣ ಪತ್ತೆಪುರ್, ಭೀಮರಾಯ ಮೇಸ್ತ್ರಿ ಮಾಳ್ಳಳಿಕರ್, ಪುಂಡಲಿಕ್ ಬಸರಿಗಿಡ, ಮಲ್ಲಪ್ಪ ಇಂಗಳಗಿ, ಮಲ್ಲಿಕಾರ್ಜುನ್ ಕಡಕಲ್, ಬಸವರಾಜ್ ಮಲ್ಲೆ, ಬಸವಣ್ಣಪ್ಪ ಆರ್ ಮಾಳಳ್ಳಿಕರ್, ಜೇಟೆಪ್ಪ ಬಸರಿಗಿಡ, ಸುರೇಶ ಮಾಳಳ್ಳಿಕರ್, ಲಕ್ಷ್ಮಣ ಬಸರೀಗಿಡ, ಯಲ್ಲಪ್ಪ ಬಾವಿಮನಿ, ಸಂಗಣ್ಣಕರಡಕಲ್, ಪರಶುರಾಮ ಮಾಳಳ್ಳಿಕರ್, ಗೊತ್ತಪ್ಪ ಮುದ್ದನೂರ್, ಮರೆಪ್ಪ ಕಟ್ಟಿಮನಿ, ತಿಪ್ಪಣ ಅಗ್ನಿ, ಮಾಂತೇಶ್ ಮಳಳ್ಳಿಕರ್, ಮಡಿವಾಳಪ್ಪ ಬಾಳಬಟ್ಟೆ, ಮಲ್ಲಿಕಾರ್ಜುನ ಕಟ್ಟಿಮನಿ, ಅಂಬರೀಶ್ ಬೊಮ್ಮನಹಳ್ಳಿ, ಪ್ರಕಾಶ್ ಮಾಳಳ್ಳಿಕರ್, ಶಿವುರಾಜ್ ಯಮನೂರ, ರೇಣುಕಾ, ಶೋಭಾ, ಸಿದ್ದರಾಮ್ ಇಂಡಿ, ಮುಜಾಜ್ ಸಾಬ್, ಉದಯ್ ಕುಮಾರ್, ಭೀಮಣ್ಣ ದೊಡ್ಡಮನಿ, ಮರೆಪ್ಪ, ಸಿದ್ದರಾಮ ಕಟ್ಟಿಮನಿ ಇತರರು ಇದ್ದರು

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR